ಸಂಪುಟ: 06 ಸಂಚಿಕೆ: 131 ಪುಟಗಳು: 08 ಶುಕ್ರವಾರ 24 ಜುಲೈ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833

9448225696 +91 8035841833

₹5


**ಮುಂಜಾನೆ ಮಾತು**

ವ್ಯಕ್ತಿತ್ವದಿಂದ ಗಳಿಸಿದ ಒಳ ಸೌಂದರ್ಯಕ್ಕೆ ಪ್ರಸಾಧನಗಳ ಹಂಗಿಲ್ಲ. ಹೊರ ಚೆಲುವಿಗಷ್ಟೇ ಆಭರಣಗಳ ಅವಶ್ಯಕತೆ. ಅಂತರಂಗದ ಚೆಲುವಿಗೆ ಶ್ರಮಿಸೋಣ!

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಶಿವನಸಮುದ್ರ, ಶಿಂಷಾದಲ್ಲಿ ಜಲವಿದ್ಯುತ್ ಉತ್ಪಾದನೆ ಸಂಪೂರ್ಣ ಸ್ಥಗಿತ



• ಉದಯವಾಹಿನಿ, ಬೆಂಗಳೂರು

ಕಾವೇರಿ ಕಣಿವೆಯಲ್ಲಿ ತೀವ್ರ ಮಳೆ ಕೊರತೆ ಉಂಟಾಗಿದ್ದು, ಪೂರ್ವ ಮುಂಗಾರು ಮತ್ತು ಮುಂಗಾರು ಮಳೆ ಕೈಕೊಟ್ಟ ಕಾರಣ ಕಾವೇರಿ ನದಿ ಬತ್ತಿಹೋಗಿ ಜಲವಿದ್ಯುತ್ ಘಟಕಗಳಿಗೆ ನೀರಿನ ಅಭಾವ ಉಂಟಾಗಿದೆ. ಇದರಿಂದ ಕಳೆದ ಒಂದೂವರೆ ತಿಂಗಳಿಂದ (ಜೂನ್ 6 ರಿಂದ) ಈ ಘಟಕಗಳಲ್ಲಿ ಜಲವಿದ್ಯುತ್ ಉತ್ಪಾದನೆ ಸಂಪೂರ್ಣವಾಗಿ ಸ್ಥಗಿತಗೊಂಡಿದೆ. ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜಸಾಗರ ಜಲಾಶಯಕ್ಕೆ ಒಳಹರಿವು ಗಣನೀಯವಾಗಿ ಕಡಿಮೆಯಾಗಿದೆ. ಆಣೆಕಟ್ಟೆಯಲ್ಲಿ ಪ್ರಸ್ತುತ 92.38 ಅಡಿ ನೀರು ಮಾತ್ರವಿದ್ದು, ಭರ್ತಿಯಾಗಲು ಇನ್ನೂ 32 ಅಡಿ ನೀರು ಬೇಕಾಗಿದೆ. ಡ್ಯಾಂ ಭರ್ತಿಯಾಗದ ಕಾರಣ ಕಾವೇರಿ ನದಿಗೆ ನೀರು ಹರಿಸಲು ಸಾಧ್ಯವಾಗುತ್ತಿಲ್ಲ.

ಶಿವನಸಮುದ್ರ ಯೋಜನೆಯು ವಾರ್ಷಿಕ 518 ದಶಲಕ್ಷ ಯುನಿಟ್ ಸಾಮರ್ಥ್ಯ ಹೊಂದಿದ್ದು, ಇಲ್ಲಿರುವ 10 ಘಟಕಗಳು ವಾರ್ಷಿಕ 367.92 ದಶಲಕ್ಷ ಯುನಿಟ್ ಉತ್ಪಾದನಾ ಸಾಮರ್ಥ್ಯ ಹೊಂದಿವೆ. ಶಿಂಷಾ ಯೋಜನೆಯಲ್ಲಿ ಎರಡು ಘಟಕಗಳಿದ್ದು, ವಾರ್ಷಿಕವಾಗಿ 150.67 ದಶಲಕ್ಷ ಯುನಿಟ್ ಉತ್ಪಾದನಾ ಸಾಮರ್ಥ್ಯ ಹೊಂದಿದೆ. ಪ್ರತಿ ಮೆಗಾವಾಟ್ ವಿದ್ಯುತ್ ಉತ್ಪಾದನೆಗೆ 35 ಕ್ಯೂಸೆಕ್ ನೀರು ಬೇಕಾಗಲಿದ್ದು, 42 ಮೆಗಾವಾಟ್ ವಿದ್ಯುತ್ ಉತ್ಪಾದಿಸಲು ನಿತ್ಯ ಸುಮಾರು 1,400 ಕ್ಯೂಸೆಕ್ ನೀರಿನ ಅವಶ್ಯಕತೆಯಿರುತ್ತದೆ. ನೀರಿನ ಅಭಾವದಿಂದಾಗಿ ಕಾವೇರಿ ನದಿಯ ಗಗನಚುಕ್ಕಿ ಮತ್ತು ಭರಚುಕ್ಕಿ ಜಲಪಾತಗಳು ನೀರಿಲ್ಲದೆ ಬಣಗುಡುತ್ತಿವೆ.

## ಡಿಸೆಂಬರ್ ಹೊತ್ತಿಗೆ ಕ್ವಿನ್ ಸಿಟಿಯಲ್ಲಿ 200 ಎಕರೆ ಸೆಮಿಕಂಡಕ್ಟರ್ ಪಾರ್ಕ್ ಆರಂಭ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಸದ್ಯದಲ್ಲೇ ಜಾರಿಗೆ ಬರಲಿರುವ 2026-2031ರ ನೂತನ ವೈಮಾಂತರಿಕ್ಷ ಮತ್ತು ರಕ್ಷಣಾ ನೀತಿಯಲ್ಲಿ ಆಧುನಿಕ ಎಲೆಕ್ಟ್ರಾನಿಕ್ ಸಮರ ಸಾಧನಗಳು, ಎಂಬೆಡೆಡ್ ತಂತ್ರಾಂಶ, ಇ-ವಿಟಾಲ್ ಸಾಧನಗಳು, ಬಾಹ್ಯಾಕಾಶ ಕ್ಷೇತ್ರದಲ್ಲಿ ಬಳಸಲಾಗುವ ಪೇಲೋಡ್ ಇವುಗಳನ್ನು ಗಮನದಲ್ಲಿ ಇಟ್ಟುಕೊಂಡು ಸಮಗ್ರ ಕ್ಲಸ್ಟರುಗಳನ್ನು ಅಭಿವೃದ್ಧಿಪಡಿಸಲು ಒತ್ತು ಕೊಡಲಾಗಿದೆ. ಜೊತೆಗೆ ಈ ವರ್ಷದ ಡಿಸೆಂಬರ್ ಹೊತ್ತಿಗೆ ಕ್ವಿನ್ ಸಿಟಿ ಹಂತ-1ರಲ್ಲಿ 200 ಎಕರೆ ವಿಸ್ತಾರದ ಸೆಮಿಕಂಡಕ್ಟರ್ ಪಾರ್ಕ್ ಕಾರ್ಯಾಚರಣೆ ಆರಂಭಿಸಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ ಹೇಳಿದರು. ಗುರುವಾರ ಇಲ್ಲಿನ ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಆರಂಭವಾದ 15ನೇ ವರ್ಷದ ವ್ಯೂಹಾತ್ಮಕ ವಿದ್ಯುನ್ಮಾನ ಸಮಾವೇಶದಲ್ಲಿ ಸ್ಟ್ರಾಟೆಜಿಕ್ ಎಲೆಕ್ಟ್ರಾನಿಕ್ ಸಮ್ಮಿಟ್-2026) ಅವರು ಮಾತನಾಡಿದರು.

## ಸರ್ಕಾರಿ ಶಾಲಾ ಮಕ್ಕಳಿಗೆ ತಟ್ಟಿದ ಮೊಟ್ಟೆ ದರ ಏರಿಕೆ ಬಿಸಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಸರ್ಕಾರಿ ಶಾಲೆಗಳ ಬಡ ಮಕ್ಕಳಿಗೆ ಪೌಷ್ಟಿಕ ಆಹಾರ ಅಂತ ಮೊಟ್ಟೆ ಕೊಡುತ್ತಿದೆ. ಒಂದು ಮೊಟ್ಟೆಗೆ ಸರ್ಕಾರ ನೀಡುತ್ತಿರುವುದು ಕೇವಲ 6 ರೂ. ಆದರೆ ಮಾರುಕಟ್ಟೆಯಲ್ಲಿ ಒಂದು ಮೊಟ್ಟೆಗೆ 8,9,10 ರೂ ಇದೆ. ಹೀಗಾಗಿ ಮೊಟ್ಟೆ ತಗುಲುವ ಹೆಚ್ಚಿನ ದರವನ್ನು ಮುಖ್ಯ ಶಿಕ್ಷಕರೇ ತಮ್ಮ ಕೈಯಿಂದ ಕೊಡುವ ದುಸ್ಥಿತಿ ಎದುರಾಗಿದ್ದು, ಪ್ರತಿ ತಿಂಗಳು 10 ಸಾವಿರಕ್ಕೂ ಅಧಿಕ ಹಣ ನೀಡಬೇಕಾದ ಸಮಸ್ಯೆ ಎದುರಾಗಿದೆ. ರಾಜ್ಯದಲ್ಲಿ ದಿನದಿಂದ ದಿನಕ್ಕೆ ಮೊಟ್ಟೆ ದರ ಏರಿಕೆಯಾಗುತ್ತಿದ್ದು, ಅದರ ಬಿಸಿ ಈಗ ಸರ್ಕಾರಿ ಶಾಲೆಗಳ ಬಿಸಿಯೂಟ ಯೋಜನೆಗೂ ತಟ್ಟಿದೆ. ರಾಜ್ಯ ಸರ್ಕಾರ ಪ್ರತಿ ಮೊಟ್ಟೆಗೆ ಕೇವಲ 6 ರೂ ನೀಡುತ್ತಿದ್ದರೆ, ಮಾರುಕಟ್ಟೆಯಲ್ಲಿ ಒಂದು ಮೊಟ್ಟೆಯ ಬೆಲೆ 8 ರಿಂದ 10 ರೂ. ವರೆಗೆ ಏರಿಕೆ ಆಗಿದೆ. ಈ ಕಾರಣದಿಂದ ಸರ್ಕಾರಿ ಶಾಲೆಗಳ ಮುಖ್ಯ ಶಿಕ್ಷಕರು ತಮ್ಮ ಸ್ವಂತ ಹಣ ಖರ್ಚು ಮಾಡಿ ಮಕ್ಕಳಿಗೆ ಮೊಟ್ಟೆ ವಿತರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರದ ಆದೇಶದಂತೆ ವಾರದಲ್ಲಿ ಆರು ದಿನ ಮಕ್ಕಳಿಗೆ ಮೊಟ್ಟೆ ವಿತರಿಸಬೇಕಿದ್ದು, ಹೆಚ್ಚಿದ ದರದಿಂದ ಶಿಕ್ಷಕರಿಗೆ ಪ್ರತಿ ತಿಂಗಳು 8 ರಿಂದ 10 ಸಾವಿರ ರೂ. ವರೆಗೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುತ್ತಿದೆ. ಪರಿಣಾಮವಾಗಿ ಕೆಲವು ಶಾಲೆಗಳು ಮೊಟ್ಟೆ ವಿತರಣೆಯನ್ನು ಸ್ಥಗಿತಗೊಳಿಸಿ ಬದಲಾಗಿ ಬಾಳೆಹಣ್ಣು ನೀಡುತ್ತಿವೆ.

ಇನ್ನೂ ಕೆಲವು ಶಾಲೆಗಳಲ್ಲಿ ಕೆಲ ಮಕ್ಕಳಿಗೆ ಮೊಟ್ಟೆ, ಉಳಿದವರಿಗೆ ಬಾಳೆಹಣ್ಣು ನೀಡುವ ಅನಿವಾರ್ಯ ಸ್ಥಿತಿ ಎದುರಾಗಿದೆ. ಹೀಗಾಗಿ ಸರ್ಕಾರ ಮೊಟ್ಟೆ ದರ ಹೆಚ್ಚಿಸಿ ಮುಖ್ಯ ಶಿಕ್ಷಕರಿಗೆ ಸಮಸ್ಯೆ ಪರಿಹರಿಸಿ ಅಂತ ವಿದ್ಯಾರ್ಥಿಗಳು ಒತ್ತಾಯಿಸಿದ್ದಾರೆ.

## ಗ್ರಾಹಕರಿಗೆ ದರ ಏರಿಕೆ ಶಾಕ್ ? ತುಪ್ಪ ಕೆಜಿಗೆ 15 ರೂ., ಬೆಣ್ಣೆ ದರ 22 ರೂ. ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಗ್ರಾಹಕರಿಗೆ ಸರ್ಕಾರ ದರ ಏರಿಕೆ ಶಾಕ್ ಕೊಟ್ಟಿದೆ. ಬೆಣ್ಣೆ ಮತ್ತು ತುಪ್ಪ ದರವನ್ನು ಹೆಚ್ಚಳ ಮಾಡಿದೆ. ತುಪ್ಪದ ಬೆಲೆ ಕೆಜಿಗೆ 15 ರೂ., ಬೆಣ್ಣೆ ದರ ಕೆಜಿಗೆ 22 ರೂ. ದರ ಹೆಚ್ಚಿಸಲಾಗಿದೆ. ಪರಿಷ್ಕೃತ ದರ ಇಂದಿನಿಂದಲೇ ಜಾರಿಗೆ ಬರಲಿದೆ. ಎಲ್ಲಾ ಕೆಎಂಎಫ್ ಮಳಿಗೆಗಳಲ್ಲೂ ದರ ಏರಿಕೆ ಆಗಲಿದೆ. ಹಾಲಿನ ಉತ್ಪನ್ನಗಳ ದರ ಏರಿಕೆಯಿಂದ ಗ್ರಾಹಕರಿಗೆ ಹೊರೆಯಾಗಿದೆ. ತುಪ್ಪ, ಬೆಣ್ಣೆ ಖರೀದಿ ದುಬಾರಿಯಾಗಿದೆ. ಇದರಿಂದ ಗೃಹ ಬಳಕೆ ಹಾಗೂ ಹೋಟೆಲ್ ಉದ್ಯಮದ ಮೇಲೂ ಪರಿಣಾಮ ಬೀರಲಿದೆ. ಬೆಂಗಳೂರು ಸಹಕಾರ ಹಾಲು ಒಕ್ಕೂಟದಿಂದ ಏರಿಕೆ ಮಾಡಲಾಗಿದೆ.

ಹಾಲಿನ ಉತ್ಪನ್ನಗಳ ದರ ಏರಿಕೆಯಿಂದ ಗ್ರಾಹಕರಿಗೆ ಹೊರೆಯಾಗಿದೆ. ತುಪ್ಪ, ಬೆಣ್ಣೆ ಖರೀದಿ ದುಬಾರಿಯಾಗಿದೆ. ಇದರಿಂದ ಗೃಹ ಬಳಕೆ ಹಾಗೂ ಹೋಟೆಲ್ ಉದ್ಯಮದ ಮೇಲೂ ಪರಿಣಾಮ ಬೀರಲಿದೆ. ಬೆಂಗಳೂರು ಸಹಕಾರ ಹಾಲು ಒಕ್ಕೂಟದಿಂದ ಏರಿಕೆ ಮಾಡಲಾಗಿದೆ.

# ಮಳೆ ಅಬ್ಬರ ಮಹಾ ತತ್ತರ



- ನೀರಲ್ಲಿ ಮುಳುಗಿದ 50ಕ್ಕೂ ಹೆಚ್ಚು ಕಾರುಗಳು
- ಥಾಣೆಯ ಕಲ್ಯಾಣ ತಾಲ್ಲೂಕಿನ ಹಲವು
- ಸೇತುವೆಗಳು ಜಲಾವೃತ, ಸಂಪರ್ಕ ಕಡಿತ

### ರೈಲು ಸಂಚಾರದ ಮೇಲೆ ಪರಿಣಾಮ

ಅಹಮದಾಬಾದ್ ಮತ್ತು ಮುಂಬೈ ನಡುವಿನ 3 ರೈಲುಗಳು ರದ್ದಾಗಿವೆ. ಮುನ್ನೆಚ್ಚರಿಕಾ ಕ್ರಮವಾಗಿ ಘೋಲ್ವಡ್ ಮತ್ತು ಉಮರ್‌ಗಾಂವ್ ನಿಲ್ದಾಣಗಳ ನಡುವಿನ ಮಾರ್ಗದಲ್ಲಿ ರೈಲು ಸಂಚಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಇದರಿಂದಾಗಿ ಕೆಲವು ರೈಲುಗಳ ಸಂಚಾರದ ಮೇಲೆ ಪರಿಣಾಮ ಉಂಟಾಗಿದೆ.

### ಮಹಾರಾಷ್ಟ್ರದ ಪಾಲ್ಘರ್‌ನಲ್ಲಿ ಭಾರೀ ಪ್ರವಾಹ



### 891 ಜನರ ರಕ್ಷಣೆ, 2 ಲಕ್ಷ ಮನೆಗಳಿಗೆ ವಿದ್ಯುತ್ ಸ್ಥಗಿತ

• ಉದಯವಾಹಿನಿ, ದೆಹಲಿ

## ಮಹಾರಾಷ್ಟ್ರದಲ್ಲಿ ಈ ವರ್ಷ ಮುಂಗಾರು ಚುರುಕು

ಮಹಾರಾಷ್ಟ್ರದಲ್ಲಿ ಮುಂಗಾರು ಮತ್ತೆ ಬಿರುಸುಗೊಂಡಿದ್ದು, ರಾಜ್ಯದ ಹಲವು ಭಾಗಗಳಲ್ಲಿ ಧಾರಾಕಾರ ಮಳೆ ಜನಜೀವನವನ್ನು ಅಸ್ತವ್ಯಸ್ತಗೊಳಿಸಿದೆ. ಅದರಲ್ಲೂ ಥಾಣೆ ಜಿಲ್ಲೆಯ ಕಲ್ಯಾಣ ತಾಲ್ಲೂಕಿನಲ್ಲಿ ಸುರಿಯುತ್ತಿರುವ ನಿರಂತರ ಮಳೆಯಿಂದ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಹಲವು ಸೇತುವೆಗಳು ಜಲಾವೃತಗೊಂಡಿವೆ. ಪರಿಣಾಮ ಅನೇಕ ಗ್ರಾಮಗಳ ಸಂಪರ್ಕ ಕಡಿತಗೊಂಡಿದ್ದು, ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತವಾಗಿದೆ. ಉಲ್ಹಾಸ್ ಹಾಗೂ ಕಾಲು ನದಿಗಳಲ್ಲಿ ನೀರಿನ ಹರಿವು ತೀವ್ರವಾಗಿ ಹೆಚ್ಚಾಗಿರುವ ಕಾರಣ ಮೋಹನೆ ಮೋಹಿಲಿ, ರೂಂದೆ, ರಾಯತೆ ಸೇರಿದಂತೆ ಹಲವು ಪ್ರಮುಖ ಸೇತುವೆಗಳು ಸಂಪೂರ್ಣ ನೀರಿನಲ್ಲಿ ಮುಳುಗಿವೆ. ಸುರಕ್ಷತಾ ದೃಷ್ಟಿಯಿಂದ ಈ ಸೇತುವೆಗಳ ಮೇಲಿನ ವಾಹನ ಸಂಚಾರವನ್ನು ಆಡಳಿತ ತಾತ್ಕಾಲಿಕವಾಗಿ ನಿಷೇಧಿಸಿದೆ. ಸೇತುವೆಗಳು ಜಲಾವೃತಗೊಂಡಿರುವುದರಿಂದ ಗ್ರಾಮೀಣ ಪ್ರದೇಶಗಳ ಜನರು ದೈನಂದಿನ ಸಂಚಾರಕ್ಕೆ ತೊಂದರೆ ಅನುಭವಿಸುತ್ತಿದ್ದಾರೆ. ಶಾಲಾ-ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು, ಉದ್ಯೋಗಿಗಳು ಹಾಗೂ ರೈತರು ಪರದಾಡುವಂತಾಗಿದೆ. ಕೆಲವು ಗ್ರಾಮಗಳಿಗೆ ಅಗತ್ಯ ವಸ್ತುಗಳ ಪೂರೈಕೆಯ ಮೇಲೂ ಪರಿಣಾಮ ಬಿದ್ದಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ. ರಸ್ತೆಗಳಲ್ಲಿ ಮಳೆನೀರು ನಿಂತಿರುವುದರಿಂದ ವಾಹನಗಳ ಸಂಚಾರ ನಿಧಾನಗೊಂಡಿದ್ದು, ಹಲವೆಡೆ ಉದ್ದನೆಯ ಟ್ರಾಫಿಕ್ ಜಾಮ್ ಉಂಟಾಗಿದೆ. ತಗ್ಗು ಪ್ರದೇಶಗಳ ಮನೆಗಳು ಮತ್ತು ಅಂಗಡಿಗಳಿಗೂ ನೀರು ನುಗ್ಗುವ ಸಾಧ್ಯತೆ ಇರುವುದರಿಂದ ನಿವಾಸಿಗಳನ್ನು ಎಚ್ಚರಿಕೆಯಿಂದ ಇರಲು ಅಧಿಕಾರಿಗಳು ಸೂಚಿಸಿದ್ದಾರೆ. ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಥಾಣೆ, ಮುಂಬೈ, ಪಾಲ್ಘರ್ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಮುಂದಿನ 24 ಗಂಟೆಗಳ ಕಾಲ ಭಾರೀ ಮಳೆಯ ಮುನ್ಸೂಚನೆ ನೀಡಿದೆ. ಇದರಿಂದಾಗಿ ಪರಿಸ್ಥಿತಿ ಇನ್ನಷ್ಟು ಗಂಭೀರವಾಗುವ ಸಾಧ್ಯತೆ ಇರುವುದಾಗಿ ಎಚ್ಚರಿಕೆ ನೀಡಲಾಗಿದೆ. ಜಿಲ್ಲಾ ಆಡಳಿತ, ವಿಪತ್ತು ನಿರ್ವಹಣಾ ಪಡೆ, ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯ ಸಂಸ್ಥೆಗಳು ತುರ್ತು ಪರಿಸ್ಥಿತಿಯನ್ನು ಎದುರಿಸಲು ಸಜ್ಜಾಗಿವೆ. ನದಿ ತೀರ ಹಾಗೂ ತಗ್ಗು ಪ್ರದೇಶಗಳಲ್ಲಿ ವಾಸಿಸುವ ಜನರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ಅಗತ್ಯವಿದ್ದರೆ ರಕ್ಷಣಾ ಕಾರ್ಯಾಚರಣೆ ನಡೆಸಲು ದೋಣಿಗಳು ಮತ್ತು ತುರ್ತು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಮುಂಬೈ ಮಹಾನಗರ ಪ್ರದೇಶದಲ್ಲಿಯೂ ಮಳೆಯ ಪರಿಣಾಮ ಗೋಚರಿಸಿದ್ದು, ಹಲವೆಡೆ ರಸ್ತೆಗಳಲ್ಲಿ ನೀರು ನಿಂತಿದೆ. ಸ್ಥಳೀಯ ರೈಲು ಮತ್ತು ರಸ್ತೆ ಸಂಚಾರದ ಮೇಲೂ ಕೆಲವೆಡೆ ವ್ಯತ್ಯಯ ಉಂಟಾಗಿದ್ದು, ಅಗತ್ಯವಿಲ್ಲದಿದ್ದರೆ ಪ್ರಯಾಣವನ್ನು ಮುಂದೂಡುವಂತೆ ಆಡಳಿತ ಸಾರ್ವಜನಿಕರಿಗೆ ಸಲಹೆ ನೀಡಿದೆ. ಮಹಾರಾಷ್ಟ್ರದಲ್ಲಿ ಈ ವರ್ಷ ಮುಂಗಾರು ಚುರುಕುಗೊಂಡಿದ್ದು, ಕಳೆದ ಕೆಲವು ವಾರಗಳಿಂದ ಥಾಣೆ, ಕಲ್ಯಾಣ, ಡೊಂಬಿವಲಿ, ನವಿ ಮುಂಬೈ ಸೇರಿದಂತೆ ಹಲವು ನಗರಗಳು ಪದೇ ಪದೇ ಜಲಾವೃತವಾಗುತ್ತಿವೆ. ಹವಾಮಾನ ಇಲಾಖೆ ಮುಂದಿನ ದಿನಗಳಲ್ಲಿಯೂ ಮಳೆ ಮುಂದುವರಿಯುವ ಸಾಧ್ಯತೆ ಇರುವುದಾಗಿ ತಿಳಿಸಿರುವ ಹಿನ್ನೆಲೆಯಲ್ಲಿ ಆಡಳಿತ ಕಟ್ಟೆಚ್ಚರವಹಿಸಿದೆ.

## ಮೃತರ ಸಂಖ್ಯೆ 29ಕ್ಕೆ ಏರಿಕೆ; 6 ಮಂದಿ ಇನ್ನೂ ನಾಪತ್ತೆ

ಜಮ್ಮು-ಕಾಶ್ಮೀರದಲ್ಲಿ ಮಳೆ ಸಂಬಂಧಿತ ಅವಘಡಗಳಲ್ಲಿ ಮೃತಪಟ್ಟವರ ಸಂಖ್ಯೆ 29ಕ್ಕೆ ಏರಿಕೆಯಾಗಿದೆ. ಜಮ್ಮು ಪ್ರಾಂತ್ಯದ ಪೂಂಛ ಜಿಲ್ಲೆಯಲ್ಲಿ ದಿಢೀರ್ ಪ್ರವಾಹದಲ್ಲಿ ಕೊಚ್ಚಿಕೊಂಡು ಹೋಗಿದ್ದ 25 ವರ್ಷದ ಮಹಿಳೆಯ ಮೃತದೇಹ ಪತ್ತೆಯಾದ ಬಳಿಕ ಈ ಸಂಖ್ಯೆ 29ಕ್ಕೇರಿದೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.

ಈ ಪೈಕಿ ಕಾಶ್ಮೀರ ಕಣಿವೆಯ ಬಂಡಿಪೋರಾ ಜಿಲ್ಲೆಯಲ್ಲಿ ಇಬ್ಬರು ಹಾಗೂ ಬುಡ್ಗಾಮ್ ಜಿಲ್ಲೆಯಲ್ಲಿ ಒಬ್ಬರು ಮೃತಪಟ್ಟಿದ್ದಾರೆ. ಇನ್ನೂ ನಾಪತ್ತೆಯಾಗಿರುವ ಆರು ಮಂದಿಗಾಗಿ ಶೋಧ ಕಾರ್ಯಾಚರಣೆ ಮುಂದುವರಿದಿದೆ ಎಂದು ಅವರು ತಿಳಿಸಿದ್ದಾರೆ.

### ಭಾರೀ ಮಳೆಗೆ ಜಲಾವೃತ



ಗುಜರಾತ್‌ನ ಹಲವಾರು ಭಾಗಗಳಲ್ಲಿ ಭಾರೀ ಮಳೆಯಾಗಿದ್ದು, ರಾಜ್ಯದ ದಕ್ಷಿಣ ಭಾಗದಲ್ಲಿರುವ ವಲ್ಸಾದ್ ಜಿಲ್ಲೆ ಅತಿ ಹೆಚ್ಚು ಹಾನಿಗೊಳಗಾಗಿದೆ.

ವಲ್ಸಾದ್‌ನ ಉಂಬರ್ಗಾಂವ್ ಪ್ರದೇಶದಲ್ಲಿ ಗುರುವಾರ ಬೆಳಗ್ಗೆಯವರೆಗೆ ಕೇವಲ 16 ಗಂಟೆಗಳಲ್ಲಿ ಅಭೂತಪೂರ್ವ 1,100 ಮಿಮೀ ಮಳೆಯಾಗಿದೆ. ಪೀಡಿತ ಪ್ರದೇಶಗಳಿಂದ ಸಾವಿರಾರು ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ನಿರಂತರ ಮಳೆಯಿಂದಾಗಿ ಹಲವಾರು ತಗ್ಗು ಪ್ರದೇಶಗಳಲ್ಲಿ ಪ್ರವಾಹ ಮತ್ತು ಜಲಾವೃತ ಉಂಟಾಗಿದ್ದು, ವಲ್ಸಾದ್‌ನ ವಾಪಿಯಿಂದ ಹಲವಾರು ಕಾರುಗಳು ನೀರಿನಲ್ಲಿ ಮುಳುಗಿರುವುದನ್ನು ತೋರಿಸುವ ವೀಡಿಯೊ ವೈರಲ್ ಆಗಿದೆ. ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರದ ಅಂಕಿಅಂಶಗಳ ಪ್ರಕಾರ, ಇತ್ತೀಚೆಗೆ ಸುರಿದ ಭಾರೀ ಮಳೆಯಿಂದ ವಲ್ಸಾದ್ ಜಿಲ್ಲೆ ಹೆಚ್ಚು ಹಾನಿಗೊಳಗಾಗಿದೆ. ಉಂಬರ್ಗಾಂವ್ ಹೊರತುಪಡಿಸಿ, ವಲ್ಸಾದ್‌ನ ಹಲವಾರು ಇತರ ತಾಲ್ಲೂಕುಗಳು ಈ ಅವಧಿಯಲ್ಲಿ 600 ಮಿ.ಮೀ.ಗಿಂತ ಹೆಚ್ಚು ಮಳೆಯನ್ನು ದಾಖಲಿಸಿವೆ.

ಔರಂಗ, ಪರ್ ಮತ್ತು ದಮನ್ ಗಂಗಾ ಮುಂತಾದ ನದಿಗಳು ಉಕ್ಕಿ ಹರಿಯುತ್ತಿದ್ದು, ವಲ್ಸಾದ್‌ನಲ್ಲಿ ಭಾರಿ ಪ್ರವಾಹ ಉಂಟಾಗಿದೆ. ಪ್ರವಾಹದ ನಂತರ ಸೂರತ್ ನಗರದ ತಗ್ಗು ಪ್ರದೇಶಗಳಲ್ಲಿ ವಾಸಿಸುತ್ತಿದ್ದ 2,200ಕ್ಕೂ ಹೆಚ್ಚು ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ ಕಾರ್ಯಾಚರಣೆ ಕೇಂದ್ರದ ಅಂಕಿಅಂಶಗಳ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಕಳಸದಲ್ಲಿ ಭಾರೀ ಮಳೆ ಬಸ್ ನಿಲ್ದಾಣಕ್ಕೆ ನುಗ್ಗಿದ ನೀರು



ಕಳಸ ತಾಲ್ಲೂಕಿನ ಸುತ್ತಮುತ್ತ ಭಾರೀ ಮಳೆಯಾಗುತ್ತಿದೆ. ಇದರಿಂದ ಚರಂಡಿ ತುಂಬಿ ಬಸ್ ನಿಲ್ದಾಣಕ್ಕೆ ನೀರು ನುಗ್ಗಿದೆ. ಕಾಫಿನಾಡಲ್ಲಿ ಮತ್ತೆ ಮಳೆ ಚುರುಕು ಪಡೆದಿದೆ. ಚರಂಡಿ ತುಂಬಿ ರಸ್ತೆಗೆ ನೀರು ಹರಿದಿದೆ. ಮಳೆ ಕಂಡು ಮಲೆನಾಡಿಗರ ಮೊಗದಲ್ಲಿ ಮಂದಹಾಸ ಮೂಡಿದೆ. ಜುಲೈ ಕೊನೆ ಬಂದರೂ ಕೊಡಿ ಬೀಳಬೇಕಾದ ಮಲೆನಾಡ ಕೆರೆಕಟ್ಟೆಗಳಲ್ಲಿ ನೀರಿನ ಕೊರತೆ ಉಂಟಾಗಿದೆ. ಆಗಸ್ಟ್ ಬಂದರೂ ಮಳೆಗಾಗಿ ಸಮೃದ್ಧ ಮಳೆಗಾಗಿ ಆಕಾಶದ ಕಡೆ ರೈತರು ಮುಖ ಮಾಡಿದ್ದಾರೆ.

### ಚರಂಡಿಯಲ್ಲಿ ಮುಳುಗಿ 4 ವರ್ಷದ ಬಾಲಕ ಸಾವು

ಭಾರಿ ಮಳೆಯಿಂದಾಗಿ ಮನೆಯ ಹಿಂಭಾಗ ಉಕ್ಕಿ ಹರಿಯುತ್ತಿದ್ದ ಚರಂಡಿಗೆ ಕಾಲು ಜಾರಿ ಬಿದ್ದು ನಾಲ್ಕು ವರ್ಷದ ಬಾಲಕ ಸಾವನ್ನಪ್ಪಿದ ಘಟನೆ ಮಧ್ಯಪ್ರದೇಶದ ಸಿಯೋನಿ ಎಂಬಲ್ಲಿ ನಡೆದಿದೆ. ಬಾಲಕನನ್ನು ರಕ್ಷಿಸಲು ತಾಯಿಯೂ ಜಿಗಿದಿದ್ದು, ಅವರಿಗೆ ಗಂಭೀರ ಗಾಯಗಳಾಗಿವೆ. ಬಾಲಕನನ್ನು ಕೊತ್ವಾಲಿ ಪೊಲೀಸ್ ಠಾಣಾ ವ್ಯಾಪ್ತಿಯ ಖೈರಿಟೆಕ್ ಪ್ರದೇಶದ ನಿವಾಸಿ ರಿಷಿ ಯಾದವ್ ಎಂದು ಗುರುತಿಸಲಾಗಿದೆ. ಭಾರಿ ಮಳೆಯಿಂದಾಗಿ ಉಂಟಾದ ಬಲವಾದ ಪ್ರವಾಹದಲ್ಲಿ ಬಾಲಕ ಕೊಚ್ಚಿ ಹೋಗಿದ್ದಾನೆ. ನದಿಗಳು ಮತ್ತು ಚರಂಡಿಗಳು ಉಕ್ಕಿ ಹರಿಯುತ್ತಿದ್ದು, ಈ ಪ್ರದೇಶದಾದ್ಯಂತ ಜನರ ದೈನಂದಿನ ಜೀವನವನ್ನು ಅಸ್ತವ್ಯಸ್ತಗೊಳಿಸಿದೆ. ತಾಯಿ ಸುನೀತಾ ಯಾದವ್ ಅವರು ತಮ್ಮ ಮನೆಯ ಹಿಂದೆ ಇದ್ದಾಗ, ಬಾಲಕ ಇದ್ದಕ್ಕಿದ್ದಂತೆ ಕಾಲು ಜಾರಿ ಚರಂಡಿಗೆ ಬಿದ್ದಿದ್ದಾನೆ. ಸುನೀತಾ ಯಾವುದೇ ಹಿಂಜರಿಕೆಯಿಲ್ಲದೆ ಮಗನನ್ನು ರಕ್ಷಿಸಲು ವೇಗವಾಗಿ ಹರಿಯುತ್ತಿದ್ದ ನೀರಿಗೆ ಹಾರಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಸ್ಥಳೀಯರು ಆಕೆಯ ಕಿರುಚಾಟ ಕೇಳಿ ಸ್ಥಳಕ್ಕೆ ಧಾವಿಸಿದರು. ಬಹಳ ಹೊತ್ತಿನ ಪ್ರಯತ್ನದ ನಂತರ ಸುನೀತಾ ಅವರನ್ನು ಮೇಲಕ್ಕೆತ್ತಿದ್ದಾರೆ. ಆದರೆ ಅಷ್ಟರಲ್ಲಿ ರಿಷಿ ನೀರಿನ ಕೆಳಗೆ ಕಣ್ಮರೆಯಾಗಿದ್ದ. ರಕ್ಷಣಾ ತಂಡಗಳು ಮತ್ತು ಡೈವರ್‌ಗಳು ಹುಡುಕಾಟ ನಡೆಸಿದರೂ ಉಳಿಸಲಾಗಲಿಲ್ಲ. ಘಟನಾ ಸ್ಥಳದಿಂದ ಸ್ವಲ್ಪ ದೂರದಲ್ಲಿ ಬಾಲಕನ ಶವವನ್ನು ಹೊರತೆಗೆದು, ಔಪಚಾರಿಕ ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಗಿದೆ ಎಂದು ಅವರು ಹೇಳಿದರು.

## ಜಮ್ಮು ಕಾಶ್ಮೀರದಲ್ಲಿ ಪ್ರವಾಹ, ನೋಡ ನೋಡುತ್ತಿದ್ದಂತೆ ಕೊಚ್ಚಿ ಹೋದ ಅಂಗಡಿ ಮುಂಗಟ್ಟುಗಳು

ಜಮ್ಮು ಮತ್ತು ಕಾಶ್ಮೀರದಲ್ಲಿ ಭಾರಿ ಮಳೆಯ ರುದ್ರತಾಂಡವ ಮುಂದುವರೆದಿದೆ. ಪ್ರವಾಹ ಸೃಷ್ಟಿಸಿರುವ ಈ ಮಳೆಯ ಅಬ್ಬರಕ್ಕೆ ಬುಡ್ಗಾಮ್ ಜಿಲ್ಲೆಯಲ್ಲಿ ಅಪಾರ ಹಾನಿ ಸಂಭವಿಸಿದೆ. ಬುಡ್ಗಾಮ್‌ನಲ್ಲಿ 12ಕ್ಕೂ ಹೆಚ್ಚು ಅಂಗಡಿಗಳು ರಭಸವಾಗಿ ಹರಿಯುವ ನೀರಿನಲ್ಲಿ ಕೊಚ್ಚಿಹೋಗಿವೆ. ನದಿಗಳಂತೆ ಭೋರ್ಗರೆಯುವ ನೀರಿನ ಪ್ರವಾಹಕ್ಕೆ ಸಿಲುಕಿ, ಅಂಗಡಿಗಳು ಸಂಪೂರ್ಣವಾಗಿ ಕುಸಿದು ನದಿಪಾಲಾಗಿವೆ.

ಮಾಲೀಕರು ನೋಡ ನೋಡುತ್ತಿದ್ದಂತೆಯೇ ತಮ್ಮ ವ್ಯಾಪಾರದ ತಾಣಗಳು ಪ್ರವಾಹಕ್ಕೆ ಸಿಲುಕಿ ನಾಶವಾಗುವುದನ್ನು ನಿಲ್ಲಿಸಲು ಸಾಧ್ಯವಾಗಲಿಲ್ಲ. ನದಿಗಳಂತೆ ಭೋರ್ಗರೆಯುವ ನೀರಿನ ಅಂಗಡಿಗಳು ಕೊಚ್ಚಿ ಹೋಗುತ್ತಿರುವ ಹೃದಯವಿದ್ರಾವಕ ಮತ್ತು ಭೀಕರ ದೃಶ್ಯಗಳು ಸ್ಥಳೀಯರ ಮೊಬೈಲ್ ಕ್ಯಾಮೆರಾಗಳಲ್ಲಿ ಸೆರೆಯಾಗಿವೆ.

## ಕಾವೇರಿ ನದಿ ನೀರು ವಿವಾದ: ತಮಿಳುನಾಡಿನ ಜೊತೆ ಸಂಧಾನಕ್ಕೆ ಮುಂದಾದ ಕರ್ನಾಟಕ; ಆ. 3ರಂದು ಮಾತುಕತೆಗೆ ಬರುವಂತೆ ವಿಜಯ್‌ಗೆ ಆಹ್ವಾನ

• ಉದಯವಾಹಿನಿ, ಬೆಂಗಳೂರು



ಕಾವೇರಿ ನೀರು ಹಂಚಿಕೆ ಸಮಸ್ಯೆ ಮತ್ತು ಮೇಕೆದಾಟು ಯೋಜನೆ ವಿಚಾರ ಸಂಬಂಧ ಸದಾ ಒಂದಿಲ್ಲೊಂದು ಕ್ಯಾತೆ ತೆಗೆಯುತ್ತಿರುವ ನೆರೆ ರಾಜ್ಯ ತಮಿಳುನಾಡಿನೊಂದಿಗೆ ಸಂಧಾನಕ್ಕೆ ಕರ್ನಾಟಕ ಮುಂದಾಗಿದೆ.

ಈ ವಿಚಾರವಾಗಿ ಆಗಸ್ಟ್ 3ರಂದು ಮಾತುಕತೆಗೆ ಬರುವಂತೆ ತಮಿಳುನಾಡು ಸಿಎಂ ವಿಜಯ್‌ಗೆ ಕರ್ನಾಟಕ ಆಹ್ವಾನ ನೀಡಿದೆ. ಕರ್ನಾಟಕ ಮತ್ತು ತಮಿಳುನಾಡು ನಡುವೆ ಪತ್ರ ವ್ಯವಹಾರ ನಡೆದಿದ್ದರೂ ಮಾತುಕತೆಗೆ ಬರುವ ವಿಚಾರವಾಗಿ ವಿಜಯ್‌ರಿಂದ ಈವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎನ್ನಲಾಗಿದೆ. ಹೀಗಾಗಿ ತಮಿಳುನಾಡಿನ ಮುಂದಿನ ನಿರ್ಧಾರ ಏನಿರಬಹುದು ಎಂಬ ಕುತೂಹಲ ಹೆಚ್ಚಿದೆ. ಒಂದೊಮ್ಮೆ ಕರ್ನಾಟಕದ ಆಹ್ವಾನ ಒಪ್ಪಿ ವಿಜಯ್ ಬಂದಿದ್ದೇ ಆದಲ್ಲಿ ಸಂಕಷ್ಟ ಪರಿಹಾರ ಸೂತ್ರದ ಬಗ್ಗೆ ಉಭಯ ರಾಜ್ಯಗಳ ಮುಖ್ಯಮಂತ್ರಿಗಳು ಮಹತ್ವದ ಚರ್ಚೆ ನಡೆಸಲಿದ್ದಾರೆ.

ಕರ್ನಾಟಕದಲ್ಲಿ ಬರ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆ ತಮಿಳುನಾಡಿಗೆ ನೀರು ಬಿಡದಿರಲು ಆದೇಶಿಸಿತ್ತು. ಜುಲೈ 26ರ ಬಳಿಕ ಕರ್ನಾಟಕದಲ್ಲಿ ಮಳೆಯಾಗುವ ಸಾಧ್ಯತೆಯಿದೆ . ಈ ಹಿನ್ನೆಲೆ ಒಂದು ವಾರದ ಬಳಿಕ ಅಂದರೆ ,ಜು.28ಕ್ಕೆ ದೆಹಲಿಯಲ್ಲಿ ಕಾವೇರಿ ನೀರು ನಿರ್ವಹಣಾ ಸಮಿತಿ ಸಭೆ ನಡೆಸಿ ನೀರು ಬಿಡುವುದೋ ಅಥವಾ ಬೇಡವೋ ಎಂಬ ಬಗ್ಗೆ ನಿರ್ಧಾರ ಮಾಡುವುದಾಗಿ ತಿಳಿಸಿತ್ತು. ಈ ನಡುವೆಯೇ ಮಹತ್ವದ ಬೆಳವಣಿಗೆ ನಡೆದಿದೆ.

ಇನ್ನು ಲೋಕಸಭೆ ಅಧಿವೇಶನದ ಮೊದಲ ದಿನವೇ ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ನೆರೆ ರಾಜ್ಯ ತಮಿಳುನಾಡು ಮತ್ತೆ ಕ್ಯಾತೆ ತೆಗೆದಿತ್ತು. ಕರ್ನಾಟಕದ ಮೇಕೆದಾಟು ಯೋಜನೆಗೆ ಲೋಕಸಭೆಯಲ್ಲಿ ಡಿಎಂಕೆ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಕಲಾಪ ಆರಂಭವಾಗುತ್ತಿದ್ದಂತೆಯೇ ವಿಷಯ ಪ್ರಸ್ತಾಪ ಮಾಡಿತ್ತು. ಮೇಕೆದಾಟು ವಿಚಾರವಾಗಿ ನಿಲುವಳಿ ಸೂಚನೆಗೆ ಅವಕಾಶ ಡಿಎಂಕೆ ಕೋರಿದ್ದು, ತಕ್ಷಣವೇ ಚರ್ಚೆ ನಡೆಸಬೇಕು ಎಂದು ಪಟ್ಟು ಹಿಡಿದ ಪ್ರಸಂಗ ನಡೆದಿತ್ತು. ಆದರೆ ಪ್ರಸ್ತಾವನೆಗೆ ಸ್ಪೀಕರ್ ಓಂ ಬಿರ್ಲಾ ನಿರಾಕರಿಸಿದ ಕಾರಣ ಲೋಕಸಭೆ ಸದನದ ಬಾವಿಗಿಳಿದು ಡಿಎಂಕೆ ಸಂಸದರು ಪ್ರತಿಭಟನೆ ನಡೆಸಿದ್ದರು.

## ಉಸಿರಾಟ ಸಂಬಂಧಿ ಕಾಯಿಲೆಗಳು: ಸಾರ್ವಜನಿಕ ಸ್ಥಳಗಳಲ್ಲಿ ಪಾರಿವಾಳಗಳಿಗೆ ಆಹಾರ ಹಾಕುವಂತಿಲ್ಲ ; ಮಾರ್ಗಸೂಚಿ ಪ್ರಕಟ

• ಉದಯವಾಹಿನಿ, ಬೆಂಗಳೂರು



ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ರಾಜಧಾನಿ ಬೆಂಗಳೂರಿನಲ್ಲಿ ಪಾರಿವಾಳಗಳಿಗೆ ಆಹಾರ ಹಾಕುವುದನ್ನು ನಿಯಂತ್ರಿಸಲು ಆರೋಗ್ಯ ಇಲಾಖೆ ಮಾರ್ಗಸೂಚಿ ಹೊರಡಿಸಿದೆ. ನಿಯಂತ್ರಣವಿಲ್ಲದೆ ಆಹಾರ ಹಾಕುವುದರಿಂದ ಪಾರಿವಾಳಗಳ ಸಂಖ್ಯೆ ಹೆಚ್ಚಳವಾಗಿ ಅವುಗಳ ಮಲ ಮತ್ತು ಗರಿಗಳಿಂದ ಉಸಿರಾಟ ಸಂಬಂಧಿ ಕಾಯಿಲೆಗಳ ಅಪಾಯ ಹೆಚ್ಚುತ್ತಿರುವ ಹಿನ್ನೆಲೆ ಈ ಕ್ರಮ ಕೈಗೊಳ್ಳಲಾಗಿದೆ. ಹೀಗಾಗಿ ಆರೋಗ್ಯಕ್ಕೆ ಅಪಾಯ ಅಥವಾ ಸಾರ್ವಜನಿಕರಿಗೆ ತೊಂದರೆ ಉಂಟಾಗುವ ಪ್ರದೇಶಗಳಲ್ಲಿ ಪಾರಿವಾಳಗಳಿಗೆ ಆಹಾರ ಹಾಕುವುದಕ್ಕೆ ಸಂಪೂರ್ಣ ನಿರ್ಬಂಧ ವಿಧಿಸಲಾಗಿದೆ.

ಪಾರಿವಾಳಗಳ ಮಲ ಮತ್ತು ಗರಿಗಳಿಂದ ಹರಡುವ ಸೂಕ್ಷ್ಮ ಕಣಗಳು ಶ್ವಾಸಕೋಶದ ಉರಿಯೂತ, ಅಲರ್ಜಿ ಹಾಗೂ ತೀವ್ರ ಉಸಿರಾಟದ ತೊಂದರೆಗೆ ಕಾರಣವಾಗುತ್ತಿವೆ. ವಿಶೇಷವಾಗಿ ಮಕ್ಕಳು, ವೃದ್ಧರು ಮತ್ತು ಈಗಾಗಲೇ ಶ್ವಾಸಕೋಶದ ಕಾಯಿಲೆಯಿಂದ ಬಳಲುತ್ತಿರುವವರಿಗೆ ಇದರಿಂದ ಹೆಚ್ಚಿನ ಅಪಾಯ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಅಥಾರಿಟಿ ಹಾಗೂ ಸ್ಥಳೀಯ ಸಂಸ್ಥೆಗಳು ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸೂಚಿಸಲಾಗಿದೆ.

ರಸ್ತೆ, ಪಾದಚಾರಿ ಮಾರ್ಗ, ಉದ್ಯಾನವನ ಹಾಗೂ ಖಾಸಗಿ ಜಾಗಗಳಲ್ಲಿ ಅನಿಯಂತ್ರಿತವಾಗಿ ಆಹಾರ ಹಾಕುವಂತಿಲ್ಲ. ಸ್ಥಳೀಯ ಸಂಸ್ಥೆಗಳು ಗುರುತಿಸಿದ ನಿಗದಿತ ಸ್ಥಳಗಳಲ್ಲಿ ಮಾತ್ರ, ಅದೂ ಬೆಳಿಗ್ಗೆ 7 ಗಂಟೆಯಿಂದ 9 ಗಂಟೆಯವರೆಗೆ ಮಾತ್ರ ಆಹಾರ ನೀಡಲು ಅನುಮತಿ ನೀಡಲಾಗಿದೆ. ಆಹಾರ ನೀಡುವ ಜವಾಬ್ದಾರಿಯನ್ನು ಮಾನ್ಯತೆ ಪಡೆದ ಎನ್‌ಜಿಒ ಅಥವಾ ದತ್ತಿ ಸಂಸ್ಥೆಗಳು ವಹಿಸಿಕೊಳ್ಳಬೇಕು. ನಿಗದಿತ ಸ್ಥಳದ ಸ್ವಚ್ಛತೆ, ನಿರ್ವಹಣೆ ಹಾಗೂ ಸಾರ್ವಜನಿಕರ ದೂರುಗಳನ್ನು ಈ ಸಂಸ್ಥೆಗಳೇ ನಿರ್ವಹಿಸಬೇಕು. ಮನೆಗಳ ಮೇಲ್ಛಾವಣಿ (ಟೆರೇಸ್), ಬಾಲ್ಕನಿ ಹಾಗೂ ಕಟ್ಟಡಗಳ ಸುತ್ತಮುತ್ತ ಹೆಚ್ಚಿನ ಪ್ರಮಾಣದಲ್ಲಿ ಪಾರಿವಾಳಗಳಿಗೆ ಆಹಾರ ಹಾಕದಂತೆ ನಿವಾಸಿಗಳಿಗೆ ಹಾಗೂ ಅಪಾರ್ಟ್‌ಮೆಂಟ್ ಸಂಘಗಳಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ.

ವಿಮಾನ ಸುರಕ್ಷತೆ ವಿಮಾನ ಯಾನಕ್ಕೆ ಧಕ್ಕೆಯಾಗದಂತೆ ವಿಮಾನ ನಿಲ್ದಾಣಗಳ ಸುತ್ತಮುತ್ತ ಪಾರಿವಾಳಗಳಿಗೆ ಆಹಾರ ನೀಡುವ ಕೇಂದ್ರಗಳನ್ನು ಸ್ಥಾಪಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.ಇನ್ನು ಸಾರ್ವಜನಿಕರಲ್ಲಿ ಈ ಕುರಿತು ಜಾಗೃತಿ ಮೂಡಿಸಲು ಬ್ಯಾನರ್, ಮಾಹಿತಿ ಫಲಕ ಹಾಗೂ ಡಿಜಿಟಲ್ ಅಭಿಯಾನಗಳನ್ನು ಕೈಗೊಳ್ಳಲು ಸ್ಥಳೀಯ ಸಂಸ್ಥೆಗಳಿಗೆ ಸೂಚಿಸಲಾಗಿದೆ.

# ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಕಾಂಗ್ರೆಸ್ ಯತ್ನಿಸುತ್ತಿದೆ: ಬಿ.ವೈ.ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು



ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಕಾಂಗ್ರೆಸ್ ಯತ್ನಿಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದರು. ವಿಧಾನಸೌಧ ಕಚೇರಿಯಲ್ಲಿ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕೆಲ ದಿನಗಳಿಂದ ದೆಹಲಿ ಜಂತರ್ ಮಂತರ್‌ನಲ್ಲಿ ಬಿಜೆಪಿ ನೇತೃತ್ವದಲ್ಲಿ ಧರಣಿ ನಡೆಯುತ್ತಿದೆ.

ಈ ವಿಚಾರ ಪರ ವಿರೋಧ ಚರ್ಚೆ ನಡೆಯುತ್ತಿದೆ. ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆಗೆ ಅವಕಾಶ ಇದೆ. ನೀಟ್ ಪರೀಕ್ಷೆ ಮೇ.3ಕ್ಕೆ ನಡೆದಿತ್ತು. ಮೇ 11-12ರ ಮಧ್ಯೆ ನೀಟ್ ಪರೀಕ್ಷೆಯಲ್ಲಿ ಗೊಂದಲ ಆಗಿದೆ. ಸೋರಿಕೆ ಆಗಿದೆ ಎಂಬ ಸುದ್ದಿ ಬರುತ್ತಾ ಇದ್ದ ಹಾಗೇ ಮರುಪರೀಕ್ಷೆಗೆ ಆದೇಶ ಮಾಡಿದರು. ಬಳಿಕ ತನಿಖೆಯನ್ನು ಸಿಬಿಐಗೆ ವಹಿಸಲಾಯಿತು. ಸಿಬಿಐ 13 ಜನರನ್ನು ಬಂಧನ ಮಾಡಲಾಯಿತು. ಪಿಎಂ ಅವರು ದೇಶದ ಭವಿಷ್ಯ ಯುವ ಜನತೆ ಎಂಬುದನ್ನು ಅವರು ಅರ್ಥ ಮಾಡಿಕೊಂಡಿದ್ದಾರೆ ಎಂದು ತಿಳಿಸಿದರು. ನೀಟ್ ಗೊಂದಲಕ್ಕೆ ತೆರೆ ಎಳೆಯಬೇಕು, ಮಕ್ಕಳ ಭವಿಷ್ಯಕ್ಕೆ ಸಮಸ್ಯೆ ಆಗಬಾರದು ಎಂದು 35 ದಿನಗಳಲ್ಲಿ ನೀಟ್ ಮರು ಪರೀಕ್ಷೆ ಮಾಡಿ, ರಿಸಲ್ಟ್ ಕೂಡ ಘೋಷಣೆ ಮಾಡಿದರು. ಕೇಂದ್ರ ಮುಂದಿನ ದಿನಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳು ಸೋರಿಕೆ ಆಗಬಾರದು ಎಂದು ಕಂಪ್ಯೂಟರ್ ಆಧಾರಿತ ಪರೀಕ್ಷೆಗೆ ಚಿಂತನೆ ನಡೆಸಿದೆ. ಪರೀಕ್ಷೆಗಳು ಪಾರದರ್ಶಕವಾಗಿ ನಡೆಯಬೇಕು ಎಂದು ಅನೇಕ ಕ್ರಮಗಳನ್ನು ತೆಗೆದುಕೊಳ್ಳಲಾಯಿತು. ರಾಹುಲ್ ಗಾಂಧಿ ವಿದೇಶ ಪ್ರವಾಸದಲ್ಲಿದ್ದರು. ಅಲ್ಲಿಂದ ವಾಪಸಾಗುತ್ತಿದ್ದ ಹಾಗೇ ದಿಢೀರನೇ ಪಿಎಂ ನಿವಾಸದ ಮುಂದೆ ಪ್ರತಿಭಟನೆ ಮಾಡಿದರು. ಕೇಂದ್ರ ಹಲವು ಬಾರಿ ಸ್ಪಷ್ಟಪಡಿಸಿದೆ. ಕೇಂದ್ರ ಸಚಿವರು ರಾಜೀನಾಮೆಯಿಂದ ಪರಿಹಾರ ಸಿಗಲ್ಲ ಎಂದಿದ್ದಾರೆ. ಲೋಕಸಭೆಯಲ್ಲಿ ಚರ್ಚೆ ಮಾಡೋಣ ಎಂದು ಆಹ್ವಾನ ನೀಡಿದೆ ಎಂದು ಟೀಕಿಸಿದರು.

ಆದರೆ, ಕಾಂಗ್ರೆಸ್ ಪಕ್ಷ ರಾಜಕೀಯ ಬೇಳೆ ಬೇಯಿಸಲು ಮುಂದಾದರು. ಯುವಕರ ಭವಿಷ್ಯದ ಚೆಲ್ಲಾಟ ಆಡಲು ಮುಂದಾಗಿದೆ. ರಾಜ್ಯದಲ್ಲಿ ಲಕ್ಷಾಂತರ ಮಂದಿ ಹೋರಾಟ ಮಾಡುತ್ತಿದ್ದರು. ಅವರ ಮೇಲೆ ಲಾಠಿ ಚಾರ್ಜ್ ಮಾಡಿದ್ದರು. ಆರ್ ಸಿಬಿ ಅಭಿಮಾನಿಗಳು ಕಾಲ್ತುಳಿತಕ್ಕೆ ಸಿಲುಕಿ ಸಾವಿಗೀಡಾದರು. ಆಗ ರಾಹುಲ್ ಗಾಂಧಿ ಎಲ್ಲಿ ಹೋಗಿದ್ದರು? ಅರಾಜಕತೆಗೆ ಕಾಂಗ್ರೆಸ್ ಕೈ ಹಾಕಿದೆ. ಪಿಎಂ ಮನೆ ಮುಂದೆ ಕೂತು ನಾಟಕ ಮಾಡುವ ಬದಲು ಸದನದಲ್ಲಿ ಚರ್ಚೆ ಮಾಡಬೇಕಿತ್ತು.

ಪ್ರತಿಭಟನೆ ವೇಳೆ ಮಾಧ್ಯಮದವರ ಮೇಲೆ ಹಲ್ಲೆ ಆಗಿದೆ. ಗೂಂಡಾಗಳನ್ನು ಬಿಟ್ಟು, ನೇಪಾಳ, ಶ್ರೀಲಂಕಾದಲ್ಲಿ ಗಲಭೆ ಏನಾಯಿತು, ಆ ರೀತಿ ಅರಾಜಕತೆ ಸೃಷ್ಟಿಸಲು ಮುಂದಾಗಿದೆ. ಗೂಂಡಾಗಳನ್ನು ಒಳಗೆ ಹಾಕಿ ಎಂದು ಒತ್ತಾಯಿಸಿದರು. ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ಚುನಾಯಿತ ಪ್ರತಿನಿಧಿ ಎಂದರೆ ಅಧಿವೇಶನದಲ್ಲಿ ಭಾಗವಹಿಸಿ ಸರ್ಕಾರದ ತಪ್ಪು ಎತ್ತಿ ಹಿಡಿಯುವ ಕೆಲಸ ಮಾಡಬೇಕು. ಆದರೆ ನೀಟ್ ವಿಚಾರವಾಗಿ ಸಂಸತ್ ನಲ್ಲಿ ಚರ್ಚೆ ಮಾಡದೇ ರಾಹುಲ್ ಗಾಂಧಿ ಪಲಾಯನ ಏಕೆ ಮಾಡಿದರು?. ಸದನದಲ್ಲಿ ಚರ್ಚೆ ಬರುವಂತೆ ಕೇಂದ್ರ ಸರ್ಕಾರ ಮನವಿ ಮಾಡುತ್ತಿದೆ. ಇತ್ತ ಸಿಜೆಪಿ ಚರ್ಚೆಗೆ ಬರುತ್ತಿಲ್ಲ. ಅತ್ತ ಸಂಸತ್‌ನಲ್ಲಿ ಕಾಂಗ್ರೆಸ್ ಚರ್ಚೆಗೆ ಸಿದ್ಧವಿಲ್ಲ. ಆ ಮೂಲಕ ಸಿಜೆಪಿ ಹಾಗೂ ಕಾಂಗ್ರೆಸ್ ಮ್ಯಾಚ್ ಫಿಕ್ಸ್ ಆಗಿದೆ ಎಂದು ಆರೋಪಿಸಿದರು.

ನೇಪಾಳ, ಬಾಂಗ್ಲಾದೇಶದ ಗಲಭೆಯಲ್ಲಿ ಕೇಳಿ ಬರುತ್ತಿರುವ ಘೋಷಣೆ ಇಲ್ಲಿ ಕೇಳಿ ಬರುತ್ತಿವೆ. ಇದರ ಸೂತ್ರದಾರ ಬೇರೆ ದೇಶದಲ್ಲಿ ಇದ್ದಾನೆ. ದೇಶ ವಿರೋಧಿ ಚಟುವಟಿಕೆಯಲ್ಲಿ ತೊಡಗಿರುವವರ ಜೊತೆ ರಾಹುಲ್ ಗಾಂಧಿ ಶಾಮೀಲಾಗಿರುವುದು ಸ್ಪಷ್ಟ. ನಿಮ್ಮ ಕಾಲದಲ್ಲಿ ಆದ ಪೇಪರ್ ಸೋರಿಕೆ ವೇಳೆ ಯಾರಾದರು ರಾಜೀನಾಮೆ ಕೊಟ್ಟಿದ್ದಾರಾ ಹೇಳಿ. ಕೀಳು ರಾಜಕಾರಣ. ಕೆಪಿಎಸ್ ಸಿ ಪರೀಕ್ಷೆ ನಡೆಸಲು ಯೋಗ್ಯತೆ ಇಲ್ಲ. ಆಂಗ್ಲ ಪ್ರಶ್ನೆ ಪತ್ರಿಕೆಯನ್ನು ಕನ್ನಡಕ್ಕೆ ತರ್ಜುಮೆ ಮಾಡಲು ನಿಮಗೆ ಯೋಗ್ಯತೆ ಇಲ್ಲ ಎಂದು ವಾಗ್ದಾಳಿ ನಡೆಸಿದರು.

### ಪೊಲೀಸರು ನಿಷ್ಪಕ್ಷಪಾತವಾಗಿ ವರ್ತಿಸಲಿ

ನಗರ ಪೊಲೀಸ್ ಆಯುಕ್ತರ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಆರ್.ಅಶೋಕ್, ಪೊಲೀಸ್ ಕಮಿಷನರ್‌ಗೆ ಈಗ ಹೈಕೋರ್ಟ್ ಆದೇಶ ಗಮನಕ್ಕೆ ಬಂದಿದೆ. ಬಿಜೆಪಿ ಕಚೇರಿ ಮುಂದೆ ಪ್ರತಿಭಟನೆ ಮಾಡಿದ್ದರು. ಸುಮಾರು 30 ಬಾರಿ ಪ್ರತಿಭಟನೆ ಮಾಡಿದ್ದರು. ಅವರ ಮೇಲೆ ಕೇಸ್ ಹಾಕಿದ್ದೀರಾ?. ಬಿಜೆಪಿಗೆ ಮಾತ್ರ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ಮಾಡಬಹುದು, ಕಾಂಗ್ರೆಸ್ ನವರು ರಾಜ್ಯದ್ಯಾಂತ ಪ್ರತಿಭಟನೆ ಮಾಡಬಹುದು.

ಈ ದ್ವಂದ್ವ ನಿಲುವು ಬೇಡ. ಸರ್ಕಾರಕ್ಕೆ ಕೇವಲ ಒಂದೂವರೆ ವರ್ಷ ಇರುವುದು ಮಾತ್ರ. ಪೊಲೀಸರು ನಿಷ್ಪಕ್ಷಪಾತವಾಗಿ ನಡೆದುಕೊಳ್ಳಬೇಕು. ಮೊಟ್ಟೆ ಹೊಡೆದಿರುವುದು ಪೂರ್ವ ನಿಯೋಜಿತ ಎಂದು ವಾಗ್ದಾಳಿ ನಡೆಸಿದರು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 14,618/Gram 24ct ₹13,400/Gram 22ct ಬೆಳ್ಳಿ: ₹235.00/Gram

## ಸಿಜೆಪಿಗೆ ನೂರಾರು ಕೋಟಿ ರೂ ಯಾರು ಕೊಡ್ತಿದ್ದಾರೆ ಊಟ ತಿಂಡಿ ಎಲ್ಲಿಂದ ಬರ್ತಿದೆ? BJP ಪ್ರಶ್ನೆ

• ಉದಯವಾಹಿನಿ, ಬೆಂಗಳೂರು

ಸಿಜೆಪಿಗೆ ನೂರಾರು ಕೋಟಿ ಯಾರು ಕೊಡ್ತಿದ್ದಾರೆ? ಊಟ ತಿಂಡಿ ಎಲ್ಲಿಂದ ಬರ್ತಿದೆ ಎಂದು ರಾಜ್ಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಪ್ರಶ್ನಿಸಿದ್ದಾರೆ. ಪ್ರಧಾನಿ ಮೋದಿ ನಿವಾಸದ ಎದುರು ರಾಹುಲ್ ಗಾಂಧಿ ಪ್ರತಿಭಟನೆ ನಡೆಸಿದ್ದ ಹಿನ್ನೆಲೆಯಲ್ಲಿ ಬುಧವಾರ ಬಿಜೆಪಿ ನಾಯಕರು ಕೆಪಿಸಿಸಿ ಕಚೇರಿಗೆ ಮುತ್ತಿಗೆ ಹಾಕಿದ್ದರು. ಈ ವೇಳೆ ಬಿಜೆಪಿ ಶಾಸಕ ಬಿಪಿ ಹರೀಶ್ ಮೇಲೆ ಮೊಟ್ಟೆ ದಾಳಿ ನಡೆಸಿದ್ದನ್ನು ಖಂಡಿಸಿ ಗುರುವಾರ ವಿಧಾನಸೌಧದ ಗಾಂಧಿ ಪ್ರತಿಮೆಯ ಮುಂದೆ ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ರಾಹುಲ್ ಗಾಂಧಿ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಪ್ರತಿಭಟನೆ ವೇಳೆ ಮಾತನಾಡಿದ ವಿಪಕ್ಷ ನಾಯಕ ಆರ್ ಅಶೋಕ್ ಸಿಜೆಪಿಗೆ ನೂರಾರು ಕೋಟಿ ಯಾರು ಕೊಡ್ತಿದ್ದಾರೆ? ಊಟ ತಿಂಡಿ ಎಲ್ಲಿಂದ ಬರ್ತಾ ಇದೆ. ಸಿಜೆಪಿಗೆ ಬೆಂಬಲ ನೀಡುತ್ತಿರುವುದು ಕಾಂಗ್ರೆಸ್ ಪಕ್ಷದ ಹೀನ ಸಂಸ್ಕೃತಿಯಾಗಿದೆ ಎಂದು ಅಶೋಕ್ ಕಿಡಿಕಾರಿದರು.

ಅಲ್ಲದೆ ರಾಜ್ಯದಲ್ಲಿ ಗೂಂಡಾ ಸರ್ಕಾರದ ವಿರುದ್ಧ ನಮ್ಮ ಪ್ರತಿಭಟನೆ. ರಾಜ್ಯದಲ್ಲಿ ಕೊತ್ವಾಲ್ ಶಿಷ್ಯರ ಸರ್ಕಾರ ನಡೆಯುತ್ತಿದೆ. ಶಿವಾಜಿನಗರದಲ್ಲಿ ಅಧಿಕಾರಿಗಳ ವಿರುದ್ಧ ಹಲ್ಲೆ ಆಗಿದೆ. ಈ ವೇಳೆ ಬಿಜೆಪಿ ಶಾಸಕ ಬಿಪಿ ಹರೀಶ್ ಮೇಲೆ ಮೊಟ್ಟೆ ದಾಳಿ ನಡೆಸಿದ್ದನ್ನು ಖಂಡಿಸಿ ಗೂಂಡಾ ಸರ್ಕಾರದ ನೇತೃತ್ವವನ್ನು ಸಿಎಂ ಡಿಕೆ ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ವಹಿಸಿದ್ದಾರೆ ಎಂದರು.



ಉದಯವಾಹಿನಿ ಚಿತ್ರ

ನೀಟ್ ಅಕ್ರಮದ ವಿರುದ್ಧ ಕೇಂದ್ರ ಸರ್ಕಾರದ ಕ್ರಮ ಕೈಗೊಂಡಿದೆ. ನೀಟ್ ಪ್ರಕ್ರಿಯೆಯಲ್ಲಿ ಭವಿಷ್ಯದಲ್ಲಿ ಸಮಸ್ಯೆ ಆಗದಂತೆ ಸುಧಾರಣೆ ತರಲಾಗುತ್ತಿದೆ. ಹೀಗಿದ್ದರೂ ದೇಶದಲ್ಲಿ ಅರಾಜಕತೆ ಸೃಷ್ಟಿ ಮಾಡುತ್ತಿದೆ. ಕಾಂಗ್ರೆಸ್ ವಿದ್ಯಾರ್ಥಿಗಳನ್ನು ತಪ್ಪು ದಾರಿಗೆ ಎಳೆಯುವ ಕೆಲಸ ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು. - ಅರವಿಂದ ಬೆಲ್ಲದ

## ಮುತ್ತತ್ತಿ ದೇವಾಲಯ ಬಳಿ ಅರಣ್ಯ ಇಲಾಖೆಯಿಂದ ಪಾರ್ಕಿಂಗ್ ಶುಲ್ಕ ವಸೂಲಿ: ವಿವರಣೆ ಕೇಳಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಪ್ರಸಿದ್ಧ ಮುತ್ತತ್ತಿ ಶ್ರೀಆಂಜನೇಯಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡುವ ಭಕ್ತರಿಂದ ವಾಹನ ನಿಲುಗಡೆ ಶುಲ್ಕ ವಸೂಲಿ ಮಾಡುತ್ತಿರುವ ಪರಿಸರ ಅಭಿವೃದ್ಧಿ ಸಮಿತಿ'ಕ್ರಮದ ಕುರಿತು ಉಚ್ಚ ನ್ಯಾಯಾಲಯ ವಿವರಣೆ ಕೇಳಿದೆ. ಅಲ್ಲದೆ, ಪರಿಸರ ಸೂಕ್ಷ್ಮ ವಲಯದಲ್ಲಿದೆ ಎಂಬ ಕಾರಣಕ್ಕೊಂದೇ ದೇವಸ್ಥಾನವನ್ನು ಇಕೋ-ಪ್ರವಾಸೋದ್ಯಮ ಯೋಜನೆಯೆಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ತಿಳಿಸಿದೆ.ಡಿ.ನಾಗರಾಜು ಎಂಬುವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರ ನೇತೃತ್ವದ ವಿಭಾಗೀಯ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ.ಸಂಬಂಧಪಟ್ಟ ಪ್ರತಿವಾದಿಗಳು ಪಾರ್ಕಿಂಗ್ ಪ್ರದೇಶದ ಫೋಟೋಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು ಹಾಗೂ ಪಾರ್ಕಿಂಗ್ ಸೌಲಭ್ಯವನ್ನು ವಾಸ್ತವವಾಗಿ ಯಾರು ನಿರ್ವಹಿಸುತ್ತಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕು.

## ದೆಹಲಿಯಲ್ಲಿ ಕೈ ನಾಯಕರ ಜಾಲಿ ಟ್ರಿಪ್; ಮೋದಿ ಟೀಕಿಸಲು ಕಾಂಗ್ರೆಸ್ ಗೆ ನೈತಿಕ ಹಕ್ಕಿಲ್ಲ- ಅಶೋಕ್



• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ರೈತರು ಬರಗಾಲದಿಂದ ಸಂಕಷ್ಟದಲ್ಲಿರುವಾಗ, ಸಚಿವರು ನವದೆಹಲಿಯಲ್ಲಿ ರಾಜಕೀಯದಲ್ಲಿ ನಿರತರಾಗಿದ್ದಾರೆ. ಶೇ. 80 ಕ್ಕೂ ಹೆಚ್ಚು ಕೃಷಿ ಚಟುವಟಿಕೆಗಳು ಸಂಪೂರ್ಣವಾಗಿ ನಿಂತುಹೋಗಿವೆ ಮತ್ತು ರೈತರ ಜಾನುವಾರುಗಳಿಗೆ ಮೇವು ಸಿಗುತ್ತಿಲ್ಲ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರು, ಶಾಸಕರು ದೆಹಲಿಯಲ್ಲಿ ಜಾಲಿ ಟ್ರಿಪ್ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಶೇ.80ರಷ್ಟು ಕೃಷಿ ಚಟುವಟಿಕೆ ಸ್ಥಗಿತಗೊಂಡಿದೆ. ಮಳೆ ಕೊರತೆಯಿಂದ ಬೆಳೆಗಳು ಒಣಗುತ್ತಿವೆ. ಜಾನುವಾರುಗಳಿಗೆ ಮೇವು ಸಿಗುತ್ತಿಲ್ಲ. ರೈತರು ದನ-ಕರುಗಳನ್ನು ಮಾರಾಟ ಮಾಡುವ ಪರಿಸ್ಥಿತಿ ಬಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿಎಂ ಮತ್ತು ಡಿಸಿಎಂ ಬೆಳೆ ಬೆಳೆಯಬೇಡಿ ಎನ್ನುತ್ತಿದ್ದಾರೆ. ಹಾಗಾದರೆ ರೈತರು ಏನು ಮಾಡಬೇಕು. ರೈತರಿಗೆ ಸಾರ್ವತ್ರಿಕ ರಜೆ ಘೋಷಣೆ ಮಾಡುತ್ತೀರಾ ಎಂದು ಪ್ರಶ್ನಿಸಿದರು. ರಾಜ್ಯ ಸರ್ಕಾರವು ತಕ್ಷಣ ಬರಗಾಲ ಘೋಷಿಸಬೇಕು ಮತ್ತು ರೈತರಿಗೆ ಪರಿಹಾರವಾಗಿ ಎಕರೆಗೆ 50,000 ರೂ.ಗಳನ್ನು ನೀಡಬೇಕು ಎಂದು ಅಶೋಕ್ ಒತ್ತಾಯಿಸಿದರು. .

ರಾಜ್ಯದಲ್ಲಿ ತೀವ್ರ ಬರಗಾಲವಿದ್ದರೂ, ಕಾಂಗ್ರೆಸ್ ನಾಯಕರು, ಸಚಿವರು ಮತ್ತು ಶಾಸಕರು ರಾಜಕೀಯ ತಂತ್ರದಲ್ಲಿ ತೊಡಗಿಸಿಕೊಳ್ಳಲು ದೆಹಲಿಗೆ ಹೋಗಿದ್ದಾರೆ ಎಂದು ಅವರು ಹೇಳಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರೈತರಿಗೆ ಬೆಳೆಗಳನ್ನು ಬೆಳೆಯಬೇಡಿ ಎಂದು ಹೇಳುತ್ತಿದ್ದಾರೆ. ಹಾಗಿದ್ದಲ್ಲಿ, ರೈತರು ಏನು ಮಾಡಬೇಕು ಅವರು ಅವರಿಗೆ ಹೇಳಲಿ, ಎಂದು ಅವರು ಹೇಳಿದರು.

## CBIಯನ್ನು ತರಾಟೆಗೆ ತೆಗೆದುಕೊಂಡ ಸುಪ್ರೀಂ ಕೋರ್ಟ್, ತನಿಖೆ ಬಗ್ಗೆ ಅಸಮಾಧಾನ..!



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳದ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಮಹತ್ವದ ತಿರುವು ಸಿಕ್ಕಿದ್ದು, ಪ್ರಕರಣದ ಮರು ತನಿಖೆಗೆ ಸುಪ್ರೀಂ ಕೋರ್ಟ್ ಅವಕಾಶ ನೀಡುವ ಸುಳಿವು ನೀಡಿದೆ.

ಪ್ರಕರಣದ ಕುರಿತು ವಿಚಾರಣೆ ನಡೆಸಿದ ನ್ಯಾಯಪೀಠ, ಸಿಬಿಐ ತನಿಖೆಯ ಕ್ರಮದ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು, ನೀವು ಯಾರನ್ನು ರಕ್ಷಿಸಲು ಪ್ರಯತ್ನಿಸುತ್ತಿದ್ದೀರಿ? ಎಂದು ನೇರವಾಗಿ ಪ್ರಶ್ನಿಸಿದೆ. ಆದರೆ, ಈ ಕುರಿತು ಅಂತಿಮ ತೀರ್ಪನ್ನು ಕಾಯ್ದಿರಿಸಿರುವ ನ್ಯಾಯಪೀಠ, ಸಾಕ್ಷಿದಾರರಿಗೆ ನೀಡಿರುವ ರಕ್ಷಣೆಯನ್ನು ಮುಂದುವರಿಸುವಂತೆ ಹಾಗೂ ಕಾಲಕಾಲಕ್ಕೆ ಅನುಸರಣೆ ವರದಿಗಳನ್ನು ಸಲ್ಲಿಸುವಂತೆ ಸೂಚಿಸಿದೆ.

ಸೌಜನ್ಯ ಅವರ ತಾಯಿ ಕುಸುಮಾವತಿ ಗೌಡ ಅವರು, ಮರು ತನಿಖೆ ನಡೆಸಲು ನಿರಾಕರಿಸಿದ್ದ ಕರ್ನಾಟಕ ಹೈಕೋರ್ಟ್‌ನ 2024ರ ಆಗಸ್ಟ್ 30ರ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ್ದ ವಿಶೇಷ ಅನುಮತಿ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸಿತು.ವಿಚಾರಣೆ ವೇಳೆ ಮಹತ್ವದ ಬೆಳವಣಿಗೆಯೊಂದರಲ್ಲಿ, ಈ ಹಿಂದೆ ಮರು ತನಿಖೆಗೆ ವಿರೋಧ ವ್ಯಕ್ತಪಡಿಸಿದ್ದ ಕರ್ನಾಟಕ ಸರ್ಕಾರ ತನ್ನ ನಿಲುವು ಬದಲಿಸಿ, ಮರು ತನಿಖೆಗೆ ಬೆಂಬಲ ಸೂಚಿಸಿತು. ಈ ಸಂಬಂಧ ಜುಲೈ 20ರಂದು ನ್ಯಾಯಾಲಯಕ್ಕೆ ವಿವರವಾದ ಪ್ರಮಾಣಪತ್ರವನ್ನೂ ಸಲ್ಲಿಸಿತು.ಈ ಪ್ರಕರಣದಲ್ಲಿ ಸುಮಾರು ಆರು ವರ್ಷ ಜೈಲು ಶಿಕ್ಷೆ ಅನುಭವಿಸಿ, 2023ರಲ್ಲಿ ಖುಲಾಸೆಯಾದ ಸಂತೋಷ್ ರಾವ್ ಕೂಡ ಸೌಜನ್ಯ ಅವರ ತಾಯಿಯ ಮನವಿಯನ್ನು ಬೆಂಬಲಿಸಿದರು. ತಮ್ಮ ವಿರುದ್ಧ ದುರುದ್ದೇಶಪೂರ್ವಕವಾಗಿ ಪ್ರಕರಣ ದಾಖಲಿಸಲಾಗಿತ್ತು ಎಂದು ಆರೋಪಿಸಿದ ಅವರು, ನಿಜವಾದ ಅಪರಾಧಿಗಳನ್ನು ಪತ್ತೆಹಚ್ಚಬೇಕು ಎಂದು ನ್ಯಾಯಾಲಯಕ್ಕೆ ಮನವಿ ಮಾಡಿದರು.

## ಬೆಂಗಳೂರು-ನೆಲಮಂಗಲ-ಕೋಲಾರ ಹೆದ್ದಾರಿಗಳ ಟೋಲ್ ಶುಲ್ಕ ಹೆಚ್ಚಳ!

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಲವು ಹೆದ್ದಾರಿಗಳಲ್ಲಿ ಟೋಲ್ ದರಗಳನ್ನು ಹೆಚ್ಚಿಸಲಾಗಿದೆ. ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇಯ ಕರ್ನಾಟಕ ವಿಭಾಗ ಮತ್ತು ರಾಜ್ಯದ ಮೂಲಕ ಹಾದುಹೋಗುವ ಇತರ ಎರಡು ಹೆದ್ದಾರಿಗಳಿಗೆ ಟೋಲ್ ಶುಲ್ಕವನ್ನು ಹೆಚ್ಚಿಸಿದೆ. ರಾಷ್ಟ್ರೀಯ ಎಕ್ಸ್‌ಪ್ರೆಸ್‌ವೇ 7 ಬೆಂಗಳೂರು-ಬೇತಮಂಗಲ ವಿಭಾಗ ಮತ್ತು ನಲ್ಲಿ ಇಂಟರ್‌ಚೇಂಜ್ ಹೊಂದಿರುವ 207 ಕಡೆಗೆ 0.7 ಕಿಮೀ ಸಂಪರ್ಕ ರಸ್ತೆಗೆ ಈ ಹೆಚ್ಚಳ ಅನ್ವಯಿಸುತ್ತದೆ. ಪ್ರಕಾರ, ಶುಲ್ಕಗಳು ಮಾರ್ಚ್ 31, 2027 ರವರೆಗೆ ಜಾರಿಯಲ್ಲಿರುತ್ತವೆ. ಕರ್ನಾಟಕದಲ್ಲಿ, 70.7 ಕಿಮೀ ಎಕ್ಸ್ ಪ್ರೆಸ್‌ವೇ ಹೊಸಕೋಟೆಯಿಂದ ಬೇತಮಂಗಲದವರೆಗೆ ಸಾಗಿ, ಆಂಧ್ರಪ್ರದೇಶದ ಗಡಿಯನ್ನು ತಲುಪುತ್ತದೆ.

ಇದು ನಾಲ್ಕು ಟೋಲ್ ಪ್ಲಾಜಾಗಳನ್ನು ಹೊಂದಿದೆ. ಹೆಡಗಿನಬೆಲೆ (ಹೊಸಕೋಟೆ ಬಳಿ), ಅಗ್ರಹಾರ (ಕೋಲಾರ ಜಿಲ್ಲೆಯ ಮಾಲೂರು ಬಳಿ), ಕೃಷ್ಣರಾಜಪುರ ಸುಂದರಪಾಳ್ಯ (ಬೇತಮಂಗಲ ಬಳಿ). ಟೋಲ್ ಗೇಟ್‌ಗಳಿವೆ.

## ನೆರೆಮನೆಯ ವೃದ್ಧೆಯನ್ನು ಮುಗಿಸಿ, ಮೃತದೇಹ ಸೂಟ್‌ಕೇಸ್‌ನಲ್ಲಿಟ್ಟು ಕೆರೆಗೆ ಎಸೆದ ಪಾಪಿ..!

• ಉದಯವಾಹಿನಿ, ಬೆಂಗಳೂರು

ಆನ್‌ಲೈನ್ ಜೂಜಿನ ಚಟಕ್ಕೆ ಬಿದ್ದು, ಸಾಲದ ಸುಳಿಯಲ್ಲಿ ಸಿಲುಕಿದ್ದ ಯುವಕನೊಬ್ಬ, ಸಾಲ ತೀರಿಸಲು ಚಿನ್ನಾಭರಣ ದೋಚುವ ಉದ್ದೇಶದಿಂದ ತನ್ನ ನೆರೆಮನೆಯ ವೃದ್ಧ ಮಹಿಳೆಯನ್ನು ಕೊಲೆ ಮಾಡಿ, ಶವವನ್ನು ಸೂಟ್‌ಕೇಸ್‌ನಲ್ಲಿ ತುಂಬಿ ಕೆರೆಗೆ ಎಸೆದಿರುವ ಘಟನೆ ಬೆಂಗಳೂರಿನ ರಾಮೋಹಳ್ಳಿ ಸಮೀಪ ನಡೆದಿದೆ.

ಮೃತ ಮಹಿಳೆಯನ್ನು ಜಯಮ್ಮ (61) ಎಂದು ಗುರ್ತಿಸಲಾಗಿದೆ. ಪ್ರಕರಣ ಸಂಬಂಧ ಕುಂಬಳಗೋಡು ಪೊಲೀಸರು ಕೆಂಗೇರಿಯ ಚಳ್ಳಘಟ್ಟ ಗ್ರಾಮದ ನಿವಾಸಿ ಗಗನ್ ಆರ್ (21) ಎಂಬಾತನನ್ನು ಬಂಧಿಸಿದ್ದಾರೆ. ಗಗನ್ ತಾಯಿ ಮತ್ತು ಜಯಮ್ಮ ಆತ್ಮೀಯ ಸ್ನೇಹಿತರಾಗಿದ್ದರು. ಸಣ್ಣಪುಟ್ಟ ಸಹಾಯ ಕೇಳುವುದು ಸಾಮಾನ್ಯವಾಗಿತ್ತು. ಗಗನ್ ಆನ್‌ಲೈನ್ ಜೂಜಿನಲ್ಲಿ ದೊಡ್ಡ ಮೊತ್ತದ ಹಣ ಕಳೆದುಕೊಂಡು ಭಾರೀ ಸಾಲ ಮಾಡಿದ್ದ. ಯಾವಾಗಲೂ ಚಿನ್ನಾಭರಣ ಧರಿಸುತ್ತಿದ್ದ ಜಯಮ್ಮ ಅವರ ಆಭರಣಗಳನ್ನು ದೋಚುವ ಸಂಚು ರೂಪಿಸಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

# CSR ಯೋಜನೆಗಳ ಮೇಲ್ವಿಚಾರಣೆಗೆ ವಿಶೇಷ ತಂಡ ರಚನೆ: ಸಿಎಂ ಡಿ ಕೆ ಶಿವಕುಮಾರ್ ಘೋಷಣೆ

## ಎಫ್‌ಕೆಸಿಸಿಐಯನ್ನು ಅಭಿನಂದಿಸಿದ ಮುಖ್ಯಮಂತ್ರಿ, ಒಟ್ಟಿಗೆ ಸೇರುವುದು ಆರಂಭ, ಒಟ್ಟಿಗೆ ಚರ್ಚಿಸುವುದು ಪ್ರಗತಿ

• ಉದಯವಾಹಿನಿ, ಬೆಂಗಳೂರು

ಕೈಗಾರಿಕೆಗಳು ತಮ್ಮ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯನ್ನು ಪ್ರಾಥಮಿಕ ಶಿಕ್ಷಣ ಬಲಪಡಿಸುವತ್ತ ಕೇಂದ್ರೀಕರಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿದರು. ರಾಜ್ಯಾದ್ಯಂತ ನಡೆಯುತ್ತಿರುವ ಸಿಎಸ್‌ಆರ್ ಯೋಜನೆಗಳ ಮೇಲ್ವಿಚಾರಣೆಗಾಗಿ ಸರ್ಕಾರ ವಿಶೇಷ ತಂಡವನ್ನು ರಚಿಸುವುದಾಗಿ ಅವರು ಘೋಷಿಸಿದರು.

ನಗರದಲ್ಲಿ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಘ ಆಯೋಜಿಸಿದ್ದ ಗ್ಲೋಬಲ್ ಸಿಎಸ್‌ಆರ್ ಮತ್ತು ಸಸ್ಟೇನಬಿಲಿಟಿ ಸಮ್ಮಿಟ್2026ನ್ನು ಉದ್ದೇಶಿಸಿ ಮಾತನಾಡಿದ ಅವರು, ಕರ್ನಾಟಕದ ಅಭಿವೃದ್ಧಿಗೆ ಎಫ್‌ಕೆಸಿಸಿಐ ನೀಡಿರುವ ಕೊಡುಗೆಯನ್ನು ಶ್ಲಾಘಿಸಿದರು. ಎಫ್‌ಕೆಸಿಸಿಐಯನ್ನು ಅಭಿನಂದಿಸಿದ ಮುಖ್ಯಮಂತ್ರಿ, ಒಟ್ಟಿಗೆ ಸೇರುವುದು ಆರಂಭ, ಒಟ್ಟಿಗೆ ಚರ್ಚಿಸುವುದು ಪ್ರಗತಿ, ಒಟ್ಟಿಗೆ ಕೆಲಸ ಮಾಡುವುದು ಯಶಸ್ಸು ಎಂದು ಹೇಳಿದರು.

ನಗರೀಕರಣದ ಕುರಿತು ಮಾತನಾಡಿದ ಮುಖ್ಯಮಂತ್ರಿ, ತಾವು ಶಿಕ್ಷಣಕ್ಕಾಗಿ ಹಳ್ಳಿಯಿಂದ ನಗರಕ್ಕೆ ಬಂದು ಮತ್ತೆ ಊರಿಗೆ ಮರಳಲಿಲ್ಲ. ಇದು ಅನೇಕರ ಜೀವನದ ಕಥೆಯಾಗಿದೆ ಎಂದರು.

ಕರ್ನಾಟಕದ ನಗರ ಜನಸಂಖ್ಯೆ ಈಗ ಶೇ.43ಕ್ಕೆ ಏರಿಕೆಯಾಗಿದೆ ಎಂದು ತಿಳಿಸಿದ ಅವರು, ಎಸ್.ಎಂ. ಕೃಷ್ಣ ಅವರ ಸಂಪುಟದಲ್ಲಿ ಸಚಿವರಾಗಿದ್ದ ಅವಧಿಯಲ್ಲಿ ಬೆಂಗಳೂರಿನ ಜನಸಂಖ್ಯೆ ಸುಮಾರು 70 ಲಕ್ಷವಿತ್ತು. ಇಂದು ಅದು ಸುಮಾರು 1.4 ಕೋಟಿಗೆ ತಲುಪಿದ್ದು, ನಗರದಲ್ಲಿ ಸುಮಾರು 1.30 ಲಕ್ಷ ವಾಹನಗಳು ಸಂಚರಿಸುತ್ತಿವೆ ಎಂದು ಹೇಳಿದರು.ಬೆಂಗಳೂರು ಇಂದು ಜಾಗತಿಕ ನಾಯಕರ ಗಮನ ಸೆಳೆಯುತ್ತಿರುವುದಕ್ಕೆ ದೂರದೃಷ್ಟಿಯ ನಾಯಕರ ಭದ್ರ ಅಡಿಪಾಯ ಮತ್ತು ಉತ್ತಮ ಶಿಕ್ಷಣ ವ್ಯವಸ್ಥೆಯೇ ಕಾರಣ ಎಂದು ಅವರು ಹೇಳಿದರು. ದೇಶದ 140 ಅಂತಾರಾಷ್ಟ್ರೀಯ ಶಾಲೆಗಳಲ್ಲಿ ಸುಮಾರು 38 ಶಾಲೆಗಳು ಕರ್ನಾಟಕದಲ್ಲಿವೆ ಎಂದರು.

ಹಿಂದೆ ವಿಶ್ವ ನಾಯಕರು ಮೊದಲು ದೆಹಲಿ, ಮುಂಬೈ, ಚೆನ್ನೈ, ಹೈದರಾಬಾದ್ ಅಥವಾ ಕೊಲ್ಕತ್ತಾಗೆ ಭೇಟಿ ನೀಡುತ್ತಿದ್ದರು. ಈಗ ಅವರು ಮೊದಲು ಬೆಂಗಳೂರಿಗೆ ಬರುತ್ತಿದ್ದಾರೆ ಎಂದು ಹೇಳಿದರು.

ಎಲೆಕ್ಟ್ರಾನಿಕ್ ಸಿಟಿ, ಐಟಿಪಿಎಲ್ ಹಾಗೂ ಉತ್ಪಾದನಾ ವಲಯದ ಬೆಳವಣಿಗೆಯನ್ನು ಉಲ್ಲೇಖಿಸಿದ ಅವರು, ಕರ್ನಾಟಕದ ಕೈಗಾರಿಕಾ ಮತ್ತು ತಂತ್ರಜ್ಞಾನ ಪರಿಸರ ವ್ಯವಸ್ಥೆಯನ್ನು ಎಫ್‌ಕೆಸಿಸಿಐ ಮತ್ತಷ್ಟು



ಉದಯವಾಹಿನಿ ಚಿತ್ರ

ಬಲಪಡಿಸಿದೆ ಎಂದರು. ಕಾರ್ಮಿಕರು ಮತ್ತು ಉದ್ಯೋಗದಾತರ ನಡುವೆ ಸಮತೋಲನ ಇರಬೇಕು ಎಂದು ಒತ್ತಿಹೇಳಿದ ಅವರು, ಉದ್ಯೋಗದಾತರಿಲ್ಲದಿದ್ದರೆ ಉದ್ಯೋಗಿಗಳೂ ಇರುವುದಿಲ್ಲ. ಕಾರ್ಮಿಕರಿಗೆ ಅಗತ್ಯ ಬೆಂಬಲ ನೀಡುತ್ತಾ ಸಮತೋಲನ ಕಾಪಾಡಬೇಕು ಎಂದು ಹೇಳಿದರು. ಕ್ಯಾಲಿಫೋರ್ನಿಯಾದಲ್ಲಿ ಕೆಲಸ ಮಾಡುತ್ತಿರುವ 13 ಲಕ್ಷ ಎಂಜಿನಿಯರ್‌ಗಳಲ್ಲಿ ಸುಮಾರು 6 ಲಕ್ಷ ಮಂದಿ ಕರ್ನಾಟಕದವರೇ ಎಂದು ತಿಳಿಸಿದ ಅವರು, ಇದು ರಾಜ್ಯದ ಪ್ರತಿಭಾ ಸಾಮರ್ಥ್ಯವನ್ನು ತೋರಿಸುತ್ತದೆ ಎಂದರು. ರಾಜ್ಯದಲ್ಲಿ 71 ವೈದ್ಯಕೀಯ ಕಾಲೇಜುಗಳಿದ್ದು, ಪ್ರತಿ ವರ್ಷ ಸುಮಾರು 13,900 ವೈದ್ಯರು ಹಾಗೂ ಸುಮಾರು 1 ಲಕ್ಷ ಇತರ ವೈದ್ಯಕೀಯ ವೃತ್ತಿಪರರು ಹೊರಬರುತ್ತಿದ್ದಾರೆ. ಆದರೆ ಈ ಪ್ರತಿಭೆಯ ಬಹುಪಾಲು ವಿದೇಶಗಳಿಗೆ ತೆರಳುತ್ತಿದೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

> ಮಾಹಿತಿ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆ ಕ್ಷೇತ್ರಗಳ ಉದಯಕ್ಕೂ ಮುನ್ನವೇ ಎಫ್‌ಕೆಸಿಸಿಐ ಕರ್ನಾಟಕದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ಅವರು ಹೇಳಿದರು. ರಾಜ್ಯದ ಯಶಸ್ಸಿಗೆ ಕೈಗಾರಿಕಾ ಕ್ಷೇತ್ರದ ಕೊಡುಗೆಯೇ ಭದ್ರ ಬುನಾದಿಯಾಗಿದೆ ಎಂದರು.-ಸಿಎಂ ಡಿ ಕೆ ಶಿವಕುಮಾರ್

> ಸಿಎಸ್‌ಆರ್ ಪರಿಕಲ್ಪನೆಯನ್ನು ಜಾರಿಗೆ ತಂದ ಶ್ರೇಯಸ್ಸು ಮಾಜಿ ಕೇಂದ್ರ ಹಣಕಾಸು ಸಚಿವ ಪ್ರಣಬ್ ಮುಖರ್ಜಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದ ಅವರು, ಸಿಎಸ್‌ಆರ್ ದಾನವಲ್ಲ, ಸುಸ್ಥಿರ ಅಭಿವೃದ್ಧಿಗೆ ಮಾಡುವ ಹೂಡಿಕೆಯಾಗಿದೆ ಎಂದು ಅಭಿಪ್ರಾಯಪಟ್ಟರು.-ಸಿಎಂ ಡಿ ಕೆ ಶಿವಕುಮಾರ್

### ಬೆಂಗಳೂರು ಜಾಗತಿಕ ನಾಯಕರ ನೆಚ್ಚಿನ ತಾಣ

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ನಿರ್ಮಾಣದ ಆರಂಭದ ದಿನಗಳನ್ನು ನೆನಪಿಸಿಕೊಂಡ ಡಿ ಕೆ ಶಿವಕುಮಾರ್, ಆ ಯೋಜನೆಯ ಅಧ್ಯಕ್ಷರಾಗಿ ಎನ್.ಆರ್. ನಾರಾಯಣಮೂರ್ತಿ ಅವರನ್ನು ನೇಮಿಸಲಾಗಿತ್ತು. ಅಂದಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು, ಬೆಂಗಳೂರು ಜಾಗತಿಕ ನಾಯಕರ ನೆಚ್ಚಿನ ತಾಣವಾಗಲಿದೆ ಎಂದು ಹೇಳಿದ್ದನ್ನು ಸ್ಮರಿಸಿದರು.

## ಬೇರೆಯವರ ಕಣ್ಣಿನ ಕಸ ಹುಡುಕುವ ಮುನ್ನ, ನಿಮ್ಮ ಕಣ್ಣಿನ ದಿಮ್ಮಿ ತೆಗೆಯಿರಿ

ಬೇರೆಯವರ ಕಣ್ಣಿನ ಕಸ ಹುಡುಕುವ ಮುನ್ನ, ನಿಮ್ಮ ಕಣ್ಣಿನ ದಿಮ್ಮಿಯನ್ನು ತೆಗೆಯಿರಿ ಎಂದು ಕಾಂಗ್ರೆಸ್‌ಗೆ ಜೆಡಿಎಸ್ ತಪರಾಕಿ ಹಾಕಿದೆ.

ಈ ಸಂಬಂಧ ತನ್ನ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಜೆಡಿಎಸ್ ವಿಚಾರವಾಗಿ ರಾಜ್ಯದ ವಿದ್ಯಾರ್ಥಿಗಳಿಗೆ ತರಗತಿಗಳನ್ನು ಬಹಿಷ್ಕರಿಸುವಂತೆ ಒತ್ತಡ ಹೇರುತ್ತಿರುವ ಕಾಂಗ್ರೆಸ್ ಶಾಸಕರು, ನಾಯಕರೇ ಒಮ್ಮೆ ನೆನಪಿಸಿಕೊಳ್ಳಿ. ನಿಮ್ಮದೆ ಸರ್ಕಾರವಿದ್ದಾಗ 2016ರಲ್ಲಿ ಒಂದಲ್ಲ... ಎರಡೆರಡು ಬಾರಿ ದ್ವಿತೀಯ ಪಿಯುಸಿ ರಸಾಯನಶಾಸ್ತ್ರ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿತ್ತು.ಅಂದು ಲಕ್ಷಾಂತರ ವಿದ್ಯಾರ್ಥಿಗಳ ಪರಿಶ್ರಮಕ್ಕೆ



ಕಲ್ಲು ಹಾಕಿದ್ದು ಮರೆತುಹೋಯಿತೇ ? ಅಂದಿನ ಶಿಕ್ಷಣ ಸಚಿವ ಕಿಮ್ಮನೆ ರತ್ನಾಕರ್ ರಾಜೀನಾಮೆ ಆಗ್ರಹಿಸಿ ಲಕ್ಷಾಂತರ ವಿದ್ಯಾರ್ಥಿಗಳು ಬೀದಿಗಿಳಿದು ಹೋರಾಟ ಮಾಡಿದ್ದರು. ಆಗ ಶಿಕ್ಷಣ ಸಚಿವರು ರಾಜೀನಾಮೆ ಕೊಟ್ಟಿದ್ದರೇ ಎಂದು ಪ್ರಶ್ನಿಸಿದ್ದಾರೆ. ಈಗ ವಿಚಾರವಾಗಿ ವಿದ್ಯಾರ್ಥಿಗಳನ್ನು ಎತ್ತಿಕಟ್ಟಿ, ಪ್ರಚೋದನೆ ನೀಡುವ ಮೂಲಕ ವಾಮಮಾರ್ಗದಲ್ಲಿ ಕಾಂಗ್ರೆಸ್ ರಾಜಕೀಯ ಬೇಳೆ ಬೇಯಿಸಿಕೊಳ್ಳುತ್ತಿರುವುದು ನಾಚಿಕೆಗೇಡು ಎಂದಿದೆ.

## ಸೀಜ್ ಮಾಡಿದ ವಾಹನಗಳಿಡಲು 5 ಪಾಲಿಕೆಗಳಿಂದ ಜಾಗ ಗುರುತು..!

• ಉದಯವಾಹಿನಿ, ಬೆಂಗಳೂರು

ರಸ್ತೆ ಬದಿ ದೀರ್ಘಕಾಲದಿಂದ ಬಿಟ್ಟುಹೋಗಿರುವ ವಾಹನಗಳ ವಿರುದ್ಧ ನಗರದಲ್ಲಿ ಕಾರ್ಯಾಚರಣೆ ತೀವ್ರಗೊಂಡಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮತ್ತು ಬೆಂಗಳೂರು ಸಂಚಾರ ಪೊಲೀಸರು ಇಂತಹ ವಾಹನಗಳಿಗೆ 7 ದಿನಗಳ ನೋಟಿಸ್ ಅಂಟಿಸಿ ತೆರವು ಕಾರ್ಯಾಚರಣೆ ನಡೆಸುತ್ತಿರುವ ಬೆನ್ನಲ್ಲೇ, ವಶಪಡಿಸಿಕೊಳ್ಳುವ ವಾಹನಗಳನ್ನು ಇರಿಸಲು ಐದು ನಗರ ಪಾಲಿಕೆಗಳು ಪ್ರತ್ಯೇಕ ಜಾಗಗಳನ್ನು ಗುರುತಿಸಿವೆ.ಜಿಬಿಎ ಮೂಲಗಳ ಪ್ರಕಾರ, ಬೆಂಗಳೂರು ದಕ್ಷಿಣ ನಗರ ಪಾಲಿಕ ಅತಿ ಹೆಚ್ಚು ಆರು ಸ್ಥಳಗಳನ್ನು ವಾಹನಗಳ ಸಂಗ್ರಹಕ್ಕಾಗಿ ಗುರುತಿಸಿದೆ. ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಮೂರು ಸ್ಥಳಗಳನ್ನು ಗುರುತಿಸಿದ್ದರೆ, ಕೇಂದ್ರ, ಪೂರ್ವ ಹಾಗೂ ಉತ್ತರ ನಗರ ಪಾಲಿಕೆಗಳು ತಲಾ ಒಂದು ಸ್ಥಳವನ್ನು ಆಯ್ಕೆ ಮಾಡಿವೆ ಎಂದು ತಿಳಿದುಬಂದಿದೆ. ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ವಶಪಡಿಸಿಕೊಳ್ಳುವ ವಾಹನಗಳನ್ನು ಲಕ್ಕಸಂದ್ರದಲ್ಲಿರುವ ಯಾರ್ಡ್‌ಗೆ ಸ್ಥಳಾಂತರಿಸಲಾಗುತ್ತದೆ. ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ವಾಹನಗಳನ್ನು ಹೋಪ್ ಫಾರ್ಮ್ ಜಂಕ್ಷನ್



ಉದಯವಾಹಿನಿ ಚಿತ್ರ

ಸಮೀಪದ ಸರ್ಕಾರಿ ಜಾಗಕ್ಕೆ, ಉತ್ತರ ನಗರ ಪಾಲಿಕೆ ವ್ಯಾಪ್ತಿಯ ವಾಹನಗಳನ್ನು ಕೋಗಿಲು ಗ್ರಾಮದ ಸರ್ವೇ ಸಂಖ್ಯೆ 99ರ ಜಾಗದಲ್ಲಿ ಇರಿಸಲಾಗುತ್ತದೆ. ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಚಿಕ್ಕಲಸಂದ್ರ ಬಸ್ ನಿಲ್ದಾಣದ ಸಮೀಪ, ಚಂದ್ರ ಲೇಔಟ್‌ನ ಬಡಾವಣೆ ಅಭಿವೃದ್ಧಿ ಪ್ರಾಧಿಕಾರದ ಸರ್ವೇ ಸಂಖ್ಯೆ 78ರ ಜಾಗ ಹಾಗೂ ಮಲ್ಲೇಶ್ವರದಲ್ಲಿರುವ ಮೈಸೂರು ಲ್ಯಾಂಪ್ಸ್ ಆವರಣವನ್ನು ವಾಹನಗಳ ಸಂಗ್ರಹಕ್ಕೆ ಗುರುತಿಸಿದೆ.

## ಪಿಜಿಯಲ್ಲಿ ಸಿಲಿಂಡರ್ ಸ್ಫೋಟ; 10 ಮಂದಿಗೆ ಗಂಭೀರ ಗಾಯ

• ಉದಯವಾಹಿನಿ, ಆನೇಕಲ್

ಬೆಂಗಳೂರು ಹೊರವಲಯದ ಆನೇಕಲ್ ತಾಲ್ಲೂಕಿನ ಬೊಮ್ಮಸಂದ್ರದಲ್ಲಿ ಇಂದು ಮುಂಜಾನೆ ಸಿಲಿಂಡರ್ ಸ್ಫೋಟ ಸಂಭವಿಸಿ 10ಕ್ಕೂ ಹೆಚ್ಚು ಜನ ಗಂಭೀರವಾಗಿ ಗಾಯಗೊಂಡಿದ್ದಾರೆ.

ಬೊಮ್ಮಸಂದ್ರದ ನಾಗರಾಜ್ ರೆಡ್ಡಿ ಎಂಬುವರಿಗೆ ಸೇರಿದ ಪಿಜಿಯಲ್ಲಿ ಈ ಅವಘಡ ನಡೆದಿದೆ. ಈ ಪಿಜಿಯನ್ನು ನಾಗರಾಜ್ ರೆಡ್ಡಿ ಅವರು ಬೇರೆಯವರಿಗೆ ಲೀಸ್ ನೀಡಿದ್ದರು ಎನ್ನಲಾಗಿದೆ.

ಇಂದು ಮುಂಜಾನೆ ಸುಮಾರು 6 ಗಂಟೆಯ ಸುಮಾರಿಗೆ ಕಾರ್ಮಿಕರು ಎದ್ದೇಳುವ ಸಮಯದಲ್ಲಿ ಅಡುಗೆ ಮನೆಯಲ್ಲಿ ಸಿಲಿಂಡರ್ ಸ್ಫೋಟಗೊಂಡಿದೆ. ಸ್ಫೋಟದ ತೀವ್ರತೆಗೆ ಪಿಜಿಯಲ್ಲಿದ್ದವರು ದಿಕ್ಕಾಪಾಲಾಗಿ ಓಡಿದ್ದಾರೆ. ಈ ಪಿಜಿಯಲ್ಲಿ ಉತ್ತರ ಭಾರತದ ವಿವಿಧ ರಾಜ್ಯಗಳಿಂದ ಕೆಲಸಕ್ಕಾಗಿ ಬಂದಿದ್ದ 10ಕ್ಕೂ ಹೆಚ್ಚು ಕಾರ್ಮಿಕರು ವಾಸವಾಗಿದ್ದರು. ಗಾಯಗೊಂಡವರೆಲ್ಲರೂ ಹೊರರಾಜ್ಯದವರಾಗಿದ್ದು, ಎಲ್ಲರಿಗೂ ಗಂಭೀರ ಸ್ವರೂಪದ ಸುಟ್ಟ ಗಾಯಗಳಾಗಿವೆ. ತಕ್ಷಣವೇ ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿದ್ದಾರೆ.

ಸ್ಫೋಟದ ತೀವ್ರತೆಗೆ ಕಟ್ಟಡದ ಭಾಗಗಳಿಗೂ ಹಾನಿಯಾಗಿದೆ ಎಂದು ತಿಳಿದುಬಂದಿದೆ. ಸ್ಥಳಕ್ಕೆ ಹೆಬ್ಬಗೋಡಿ ಪೊಲೀಸ್ ಠಾಣೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

## ಹೊಸ ಪಿಂಚಣಿ ಯೋಜನೆ ರದ್ದು ಮಾಡಿ ಹಳೆಯ ಪಿಂಚಣಿ ಯೋಜನೆ ಜಾರಿಗೆ ಸರ್ಕಾರ ಚಿಂತನೆ..!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಹೊಸ ಪಿಂಚಣಿ ಯೋಜನೆ ರದ್ದುಪಡಿಸಿ, ಹಳೆಯ ಪಿಂಚಣಿ ಯೋಜನೆಯನ್ನು ಮರು ಜಾರಿಗೆ ತರಲು ರಾಜ್ಯ ಸರ್ಕಾರ ಗಂಭೀರವಾಗಿ ಚಿಂತನೆ ನಡೆಸುತ್ತಿದೆ ಎಂದು ತಿಳಿದುಬಂದಿದೆ.

ಈ ಸಂಬಂಧ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಸಲ್ಲಿಸಿರುವ ಮನವಿಯನ್ನು ಪರಿಶೀಲಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹಣಕಾಸು ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ. ರಾಜ್ಯದಲ್ಲಿ ಸುಮಾರು 5.7 ಲಕ್ಷ ಸರ್ಕಾರಿ ನೌಕರರು ಇದ್ದು, ಅವರಲ್ಲಿ 2.8 ಲಕ್ಷಕ್ಕೂ ಹೆಚ್ಚು ಮಂದಿ ಹೊಸ ಪಿಂಚಣಿ ಯೋಜನೆ ವ್ಯಾಪ್ತಿಯಲ್ಲಿದ್ದಾರೆ. 2006ರ ನಂತರ ಸರ್ಕಾರಿ ಸೇವೆಗೆ ಸೇರಿದ ಎಲ್ಲಾ ನೌಕರರು ಎನ್‌ಪಿಎಸ್ ಅಡಿಯಲ್ಲಿ ಸೇರಿದ್ದಾರೆ.ಸರ್ಕಾರಿ ನೌಕರರ ಸಂಘವು ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ, ವಿಧಾನಸಭೆ ಚುನಾವಣೆಯ ವೇಳೆ ಕಾಂಗ್ರೆಸ್ ನೀಡಿದ್ದ ಭರವಸೆಯಂತೆ ಎನ್‌ಪಿಎಸ್ ರದ್ದುಪಡಿಸಿ ಹಳೆಯ ಪಿಂಚಣಿ ಯೋಜನೆಯನ್ನು ಮರುಜಾರಿಗೊಳಿಸಬೇಕು ಎಂದು ಒತ್ತಾಯಿಸಿದೆ. ಪ್ರಸ್ತುತ ರಾಜ್ಯ ಸರ್ಕಾರ ಪ್ರತಿ ವರ್ಷ ಸರ್ಕಾರಿ ನೌಕರರ ವೇತನ ಮತ್ತು ಪಿಂಚಣಿಗಾಗಿ ಸುಮಾರು 1.2 ಲಕ್ಷ ಕೋಟಿ ರೂ. ವೆಚ್ಚ ಮಾಡುತ್ತಿದೆ.

ಹಳೆಯ ಪಿಂಚಣಿ ಯೋಜನೆ ಜಾರಿಯಾದರೆ ಸರ್ಕಾರದ ಮೇಲಿನ ಆರ್ಥಿಕ ಹೊರೆ ಇನ್ನಷ್ಟು ಹೆಚ್ಚಾಗುವ ಸಾಧ್ಯತೆ ಇದೆ.

ಇದರ ಪರಿಣಾಮ ತಕ್ಷಣ ಕಾಣಿಸದಿದ್ದರೂ, ಮುಂದಿನ ವರ್ಷಗಳಲ್ಲಿ ಹೆಚ್ಚಿನ ಸಂಖ್ಯೆಯ ನೌಕರರು ನಿವೃತ್ತಿಯಾದ ಬಳಿಕ ಹಣಕಾಸಿನ ಹೊರೆ ಹೆಚ್ಚುವ ಸಾಧ್ಯತೆಯಿದೆ ಎಂದು ಅಂದಾಜಿಸಲಾಗಿದೆ.

## GBA ಅಧಿಕಾರಿಗಳ ಮೇಲೆ ಹಲ್ಲೆ ಕೇಸ್: ರೌಡಿಶೀಟರ್ ಸೇರಿ ಇನ್ನಿಬ್ಬರ ಬಂಧನ, ಈವರೆಗೂ 12 ಆರೋಪಿಗಳು ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಶಿವಾಜಿನಗರದಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ವೇಳೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಇಬ್ಬರು ಮಹಿಳಾ ಅಧಿಕಾರಿಗಳು ಸೇರಿದಂತೆ ಐವರು ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮತ್ತಿಬ್ಬರು ಆರೋಪಿಗಳನ್ನು ಬಂಧನಕ್ಕೊಳಪಡಿಸಿದ್ದಾರೆ. ಈ ಮೂಲಕ ಪ್ರಕರಣದಲ್ಲಿ ಬಂಧಿತರ ಸಂಖ್ಯೆ 12ಕ್ಕೆ ಏರಿಕೆಯಾಗಿದೆ. ಇವರಲ್ಲಿ ಐವರು ಆರೋಪಿಗಳನ್ನು ಶನಿವಾರದವರೆಗೆ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ.ಬಂಧಿತರಲ್ಲಿ ಪ್ರಮುಖ ಆರೋಪಿಯಾಗಿರುವ ಬಸವರಾಜ್ ಪಡುಕೋಟೆ (56) ಎಂಬಾತ ವೈಟ್‌ಫೀಲ್ಡ್ ನಿವಾಸಿಯಾಗಿದ್ದು, ರೌಡಿಶೀಟರ್ ಆಗಿದ್ದಾನೆ. ಆತ ಕನ್ನಡಪರ ಸಂಘಟನೆಯೊಂದರ ಅಧ್ಯಕ್ಷ ಎಂದು ಹೇಳಿಕೊಂಡಿದ್ದು, ಅಧಿಕಾರಿಗಳ ಮೇಲೆ ದಾಳಿ ನಡೆಸಲು ತಂಡವನ್ನು ಸಂಘಟಿಸಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಮತ್ತೊಬ್ಬ ಆರೋಪಿ ಶಂಕರ್ (52) ಎಂಬಾತನನ್ನು ಶಿವಾಜಿನಗರದಲ್ಲಿ ಬಂಧಿಸಲಾಗಿದೆ.

# ಬರ ಪರಿಸ್ಥಿತಿ ಸಮರ್ಥವಾಗಿ ಎದುರಿಸಲು ನಮ್ಮ ಸರ್ಕಾರ ಸಿದ್ಧ, ಹಣದ ಕೊರತೆ ಇಲ್ಲ

## ಶೀಘ್ರವೇ ವಿಬಿ ಜಿ ರಾಮ್ ಜಿ ಕಾಮಗಾರಿಗಳನ್ನು ಆರಂಭಿಸುವಂತೆ ತಿಳಿಸಿರುವುದಾಗಿ ಡಿಸಿಎಂ ಜಿ.ಪರಮೇಶ್ವರ್ ತಿಳಿಸಿದ್ದಾರೆ.

• ಉದಯವಾಹಿನಿ, ಬೆಂಗಳೂರು

ಬರ ಪರಿಸ್ಥಿತಿ ಸಮರ್ಥವಾಗಿ ಎದುರಿಸಲು ನಮ್ಮ ಸರ್ಕಾರ ಸಿದ್ಧವಿದೆ. ಈಗಾಗಲೇ ಒಂದು ಕೋಟಿ ರೂ.ಗಳನ್ನು ಪ್ರತಿಯೊಬ್ಬ ಶಾಸಕರಿಗೂ ನೀಡಲು ತೀರ್ಮಾನಿಸಿದ್ದೇವೆ. ಅಲ್ಲದೇ, ಕುಡಿಯುವ ನೀರಿನ ಸಮರ್ಪಕ ಪೂರೈಕೆಗಾಗಿ ಪ್ರತಿ ಜಿಲ್ಲೆಗೆ 5 ಕೋಟಿ ರೂ. ಹಣವನ್ನು ನೀಡಿದ್ದೇವೆ. ಈಗಾಗಲೇ ಪಿಡಿ ಖಾತೆಗಳಲ್ಲಿ 329 ಕೋಟಿ ರೂ. ಲಭ್ಯವಿದೆ. ನಮ್ಮಲ್ಲಿ ಹಣದ ಕೊರತೆ ಇಲ್ಲ ಎಂದು ಉಪ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಗುರುವಾರ ಸದಾಶಿವನಗರದ ಗೃಹ ಕಚೇರಿಯಲ್ಲಿ ನಾಗರಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಸಮಸ್ಯೆಗಳನ್ನು ಆಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಸೂರು ಮತ್ತು ಬೆಂಗಳೂರು ವಿಭಾಗದ ಪ್ರಗತಿ ಪರಿಶೀಲನೆ ಬಾಕಿ ಇದೆ. ಬೆಂಗಳೂರು ವಿಭಾಗದಲ್ಲಿ ಜುಲೈ 25 ರಂದು ನಾನು ಮತ್ತು ಮುಖ್ಯಮಂತ್ರಿಗಳು ಸಭೆ ನಡೆಸುತ್ತೇವೆ. ಅದಾಗಿ ಮೈಸೂರಿನಲ್ಲಿ ಮಾಡುತ್ತೇವೆ. ಆಗ ನಮಗೆ ರಾಜ್ಯ ಪರಿಸ್ಥಿತಿಯ ಬಗ್ಗೆ ಸಂಪೂರ್ಣ ಚಿತ್ರಣ ಸಿಗುತ್ತದೆ. ಆ ಬಳಿಕ ಚರ್ಚಿಸಿ, ರೈತರಿಗೆ, ಸಾಮಾನ್ಯ ಜನರಿಗೆ ಸಮಸ್ಯೆಯಾಗದಂತೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಬಹುದು ಎಂಬುದರ ಬಗ್ಗೆ ತೀರ್ಮಾನಿಸುತ್ತೇವೆ ಎಂದರು. ಜನರು ಉದ್ಯೋಗಕ್ಕಾಗಿ ಗುಳೆ ಹೋಗುವುದನ್ನು ತಪ್ಪಿಸಲು ಎಲ್ಲ ಜಿಲ್ಲಾ ಪಂಚಾಯತ್ ಸಿಇಒಗಳು ವಿಬಿ ಜಿ ರಾಮ್



ಉದಯವಾಹಿನಿ ಚಿತ್ರ

ಜಿ ಯೋಜನೆಯಡಿ ಕೂಡಲೇ ಜನರಿಗೆ ಉದ್ಯೋಗ ನೀಡುವಂತೆ ಸೂಚಿಸಿದ್ದೇನೆ. ನಮ್ಮಲ್ಲಿ ಹಣದ ಕೊರತೆ ಇಲ್ಲ. ಶೀಘ್ರವೇ ಕಾಮಗಾರಿಗಳನ್ನು ಆರಂಭಿಸುವಂತೆ ತಿಳಿಸಿರುವುದಾಗಿ ಮಾಹಿತಿ ನೀಡಿದರು. ಕೇಂದ್ರ ಸರ್ಕಾರಕ್ಕೆ ನಾವು ಪತ್ರ ಬರೆದಿದ್ದೇವೆ. ಆದರೆ, ಈವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಆಗಸ್ಟ್ ತಿಂಗಳಲ್ಲಿ ಅವರು ಮನವಿಯನ್ನು ನಿರೀಕ್ಷಿಸುತ್ತಾರೆ. ಅವಾಗ ನಾವು ಮನವಿ ಸಲ್ಲಿಸಿದರೆ ಹಣವನ್ನು ಬಿಡುಗಡೆ ಮಾಡುತ್ತಾರೆ ಎಂದು ತಿಳಿಸಿದರು. ನೀವು ಭೇಟಿ ಕೊಟ್ಟ ಜಿಲ್ಲೆಗಳಲ್ಲಿ ಕೃಷಿ ಚಟುವಟಿಕೆಗಳು ಪ್ರಾರಂಭವಾಗಿದೆಯೇ ಎಂಬ ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಮುಂಗಾರಿನಲ್ಲಿ ಸ್ವಲ್ಪ ಮಳೆಯಾದ್ದರಿಂದ ರೈತರು ಬೀಜ ಬಿತ್ತನೆ ಮಾಡಿದ್ದಾರೆ. ಆಮೇಲೆ ಮಳೆಯಾಗಿಲ್ಲ. ಈಗ ಬಿತ್ತನೆ ಮಾಡಿದ್ದೆಲ್ಲ ಒಣಗಿ ಹೋಗಿದೆ. ಈಗ ಮತ್ತೆ ಆಗಸ್ಟ್ ತಿಂಗಳಲ್ಲಿ ಮಳೆಯಾದರೆ ಬೀಜ ಬಿತ್ತನೆ ಮಾಡುತ್ತಾರೆ. ಅದೊಂದು ನಿರೀಕ್ಷೆಯಿದೆ ಎಂದು ತಿಳಿಸಿದರು.

ಮೋದಿಯವರು ತನಿಖೆ ಮಾಡಿಸುತ್ತೇವೆ ಎಂದು ಬಹಳ ತಡವಾಗಿ ಪ್ರತಿಕ್ರಿಯಿಸಿದ್ದಾರೆ. ವಿದ್ಯಾರ್ಥಿಗಳ ಪರವಾಗಿ ಇದ್ದೇವೆ ಎಂದು ಮೋದಿಯವರು ಹೇಳಿದ್ದಾರೆ. ಹಾಗಿದ್ದ ಮೇಲೆ ಧರ್ಮೇಂದ್ರ ಪ್ರಧಾನ್ ಅವರನ್ನು ಅಧಿಕಾರದಿಂದ ಕೆಳಗಿಳಿಸಿ. ಜವಾಬ್ದಾರಿ ಹೊತ್ತವರ ಮೇಲೆ ಕ್ರಮ ಕೈಗೊಳ್ಳುವಂತೆ ಡಿಸಿಎಂ ಒತ್ತಾಯಿಸಿದರು.

### ಜವಾಬ್ದಾರಿ ಹೊತ್ತು ರಾಜೀನಾಮೆ ನೀಡಬೇಕು

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ವಿಚಾರದಲ್ಲಿ ದೆಹಲಿಯಲ್ಲಿ ನಡೆಯುತ್ತಿರುವ ಪ್ರತಿಭಟನೆ ಕುರಿತ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ಈ ಬಗ್ಗೆ ಸಂಸತ್ತಿನಲ್ಲಿ ಚರ್ಚೆ ಮಾಡಲು ಅವಕಾಶ ಕೇಳಿದ್ದಾರೆ. ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಪ್ರಶ್ನೆ ಇದು. ಮೊದಲ ಪರೀಕ್ಷೆಯಲ್ಲಿ ಕೆಲವರು ಉತ್ತಮ ಅಂಕಗಳನ್ನು ಪಡೆದುಕೊಂಡಿದ್ದರು. ಎರಡನೇ ಬಾರಿ ಪರೀಕ್ಷೆಯಲ್ಲಿ ಕಡಿಮೆ ಅಂಕಗಳು ಬಂದಿದೆ. ಲಕ್ಷಾಂತರ ಮಕ್ಕಳಿಗೆ ತೊಂದರೆಯಾಗಿದೆ. ಅಧಿಕಾರದಲ್ಲಿರುವವರು ಇದರ ಜವಾಬ್ದಾರಿ ಹೊತ್ತು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

## ದಿನ ಭವಿಷ್ಯ

| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
|---|---|---|
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಇಂದು ನೀವು ನಿಮ್ಮ ಪ್ರೀತಿಪಾತ್ರರೊಂದಿಗೆ ಸಮಯವನ್ನು ಕಳೆಯುವಿರಿ ಮತ್ತು ಅವರ ಮುಂದೆ ನಿಮ್ಮ ಭಾವನೆಗಳನ್ನು ಇಡಲು ಸಾಧ್ಯವಾಗುತ್ತದೆ. ನಿಮ್ಮ ಧರ್ಮಪತ್ನಿ ನಿಮ್ಮನ್ನು ವಿಶ್ವದಲ್ಲಿನ ಅತ್ಯಂತ ಶ್ರೀಮಂತ ವ್ಯಕ್ತಿಗಳಲ್ಲಿ ಒಬ್ಬರೆಂದು ಪರಿಗಣಿಸುವುದರಿಂದ ನಿಮಗೆ ಹಾಗೇ ಅನಿಸುತ್ತದೆ.

**ವೃಷಭ** ನಿಮ್ಮ ಸಂಗಾತಿಯ ಮೇಲೆ ಭಾವನಾತ್ಮಕ ಬೆದರಿಕೆಯನ್ನು ಬಳಸಬಾರದು. ಸಮಯ, ಕೆಲಸ, ಹಣ, ಸ್ನೇಹಿತರು, ಕುಟುಂಬ, ಬಂಧುಗಳು, ಎಲ್ಲವೂ ಒಂದು ಕಡೆ ಮತ್ತು ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ. ಇಂದು ಇದ್ದಕ್ಕಿದ್ದಂತೆ ಯಾವುದೇ ಅಪೇಕ್ಷಿಸದ ಪ್ರಯಾಣಕ್ಕೆ ಹೋಗಬೇಕಾಗಬಹುದು.

**ಮಿಥುನ** ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

**ಕರ್ಕಾಟಕ** ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು.

**ಸಿಂಹ** ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ನಿಮ್ಮ ವಿಚಿತ್ರ ವರ್ತನೆಯ ಹೊರತಾಗಿಯೂ ಸಂಗಾತಿ ಸಹಕಾರಿಯಾಗಿರುತ್ತಾರೆ. ಮನ್ಮಥನ ಬಾಣದಿಂದ ತಪ್ಪಿಸಿಕೊಳ್ಳುವ ಅವಕಾಶ ಕಡಿಮೆಯಿದೆ.

**ಕನ್ಯಾ** ದೇಹದ ನೋವು ಮತ್ತು ಒತ್ತಡ ಸಂಬಂಧಿತ ಸಮಸ್ಯೆಗಳನ್ನು ತಳ್ಳಿಹಾಕಲು ಸಾಧ್ಯವಿಲ್ಲ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ – ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ತಂದೆಯ ಕಠಿಣ ನಡವಳಿಕೆ ನಿಮಗೆ ಸಿಟ್ಟು ಬರಿಸಬಹುದು.

**ತುಲಾ** ಹಾಸ್ಯಪ್ರಜ್ಞೆ ಇನ್ನೊಬ್ಬರಿಗೆ ಸಂತೋಷವಸ್ತುಗಳನ್ನು ಹೊಂದುವುದರಲ್ಲದೇ ನಮ್ಮೊಳಗೇ ಇದೆಯೆಂದು ಅರ್ಥ ಮಾಡಿಸುವುದರಿಂದ ಸ್ವತಃ ಈ ಕೌಶಲ್ಯವನ್ನು ಹೊಂದಲು ಪ್ರೋತ್ಸಾಹಿಸಿದಂತಾಗುತ್ತದೆ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ.

**ವೃಶ್ಚಿಕ** ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ.

**ಧನಸ್ಸು** ನೀವು ಕೆಲವು ಉನ್ನತ ವ್ಯಕ್ತಿಗಳನ್ನು ಭೇಟಿಯಾಗಬಹುದಾದ್ದರಿಂದ ಗಾಬರಿಯಾಗಬೇಡಿ ವಿಶ್ವಾಸ ಕಳೆದುಕೊಳ್ಳದಿರಿ. ಇದು ವ್ಯಾಪಾರಕ್ಕೆ ಬಂಡವಾಳದಂತೆ ಉತ್ತಮ ಆರೋಗ್ಯಕ್ಕೆ ಅಗತ್ಯವಾಗಿದೆ. ಇನ್ನೂ ಸಂಬಳ ಪಡೆಯದವರು, ಇಂದು ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು ಮತ್ತು ನಿಮ್ಮ ಸ್ನೇಹಿತರಿಂದ ಸಾಲವನ್ನು ಕೇಳಬಹುದು.

**ಮಕರ** ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಜನರು ನಿಮಗೆ ಹೊಸ ಭರವಸೆ ಹಾಗೂ ಕನಸುಗಳನ್ನು ನೀಡುತ್ತಾರೆ ಇದು ನಿಮ್ಮ ಸ್ವಸಾಮರ್ಥ್ಯವನ್ನು ಅವಲಂಬಿಸಿರುತ್ತದೆ. ನಿಮ್ಮ ಪ್ರೇಮ ಜೀವನ ಇಂದು ಒಂದು ಸುಂದರ ತಿರುವನ್ನು ತೆಗೆದುಕೊಳ್ಳುತ್ತದೆ.

**ಕುಂಭ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಹಣಕಾಸು ಸ್ಥಿತಿ ಊಹಾಪೋಹ ,ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ನೀವು ಸ್ನೇಹಿತರ ಮೂಲಕ ಪ್ರಮುಖ ಸಂಪರ್ಕಗಳನ್ನು ಹೊಂದುತ್ತೀರಿ. ಇಂದು ನೀವು ಕುರುಡು ಪ್ರೀತಿಯನ್ನು ಪಡೆಯಲು ಸಾಧ್ಯವಾಗುತ್ತದೆ. ಪ್ರೀತಿ ನಿಮಗಾಗಿ ಗಾಳಿಯಲ್ಲಿದೆ. ಸುತ್ತಲೂ ನೋಡಿ ಎಲ್ಲವೂ ಗುಲಾಬಿಯಾಗಿದೆ.

**ಮೀನ** ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು.

## ತನ್ನೂರಿನ ಕೆನರಾ ಬ್ಯಾಂಕಿಗೆ ಕನ್ನ ಹಾಕಿದ ಆರೋಪಿ ಸೆರೆ

• ಉದಯವಾಹಿನಿ, ಬಂಟ್ವಾಳ

ತನ್ನ ಊರಿನಲ್ಲಿ ಕಾರ್ಯಾಚರಿಸುತ್ತಿದ್ದ ಕೆನರಾ ಬ್ಯಾಂಕಿಗೆ ಕನ್ನ ಹಾಕಿದ ಆರೋಪಿಯನ್ನು ಬಂಟ್ವಾಳ ಗ್ರಾಮಾಂತರ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಪುದು ಗ್ರಾಮದ ಮಾರಿಪಳ್ಳ ನಿವಾಸಿ ಮೊಹಮ್ಮದ್ ಶಾಖಿರ್ ಬಂಧಿತ ಆರೋಪಿ. ಬಂಟ್ವಾಳ ಗ್ರಾಮಾಂತರ ಠಾಣಾ ವ್ಯಾಪ್ತಿಯ ಪರಂಗಿಪೇಟೆ ಎಂಬಲ್ಲಿ ಕಾರ್ಯಾಚರಿಸುತ್ತಿದ್ದ ಕೆನರಾ ಬ್ಯಾಂಕಿನ ಮೇಲ್ಚಾವಣಿಯನ್ನು ಕೊರೆದು ಒಳಪ್ರವೇಶಿಸಿ ಹಣ ಮತ್ತು ಚಿನ್ನಾಭರಣಗಳ ಕಳ್ಳತನಕ್ಕೆ ಯತ್ನಿಸಿದ ಘಟನೆಗೆ ಸಂಬಂಧಿಸಿದಂತೆ, ಪ್ರಕರಣ ದಾಖಲಾಗಿತ್ತು. ತನಿಖೆ ನಡೆಸಿದಾಗ, ಪ್ರಕರಣದ ಆರೋಪಿಗಳ ಪೈಕಿ ಬಂಟ್ವಾಳ ತಾಲ್ಲೂಕಿನ ಪುದು ಗ್ರಾಮದ ಮಾರಿಪಳ್ಳ ನಿವಾಸಿ ಮೊಹಮ್ಮದ್ ಶಾಖಿರ್ (33) ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ. ಬಂಟ್ವಾಳ ತಾಲ್ಲೂಕಿನ ಫರಂಗಿಪೇಟೆ ಮಿನೇಜಸ್ ಪ್ಲಾಖಾದಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ಜುಲೈ 13ರಂದು ಕಳ್ಳತನದ ಯತ್ನ ನಡೆದಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ನ್ಯಾಯಾಂಗ ಪ್ರಕ್ರಿಯೆಯಂತೆ ವಿಚಾರಣೆಗೆ ಒಳಪಡಿಸಲಾಗುತ್ತಿದ್ದು, ಕಳ್ಳತನದಲ್ಲಿ ಇನ್ನೂ ಯಾರಾದರೂ ಭಾಗಿಯಾಗಿದ್ದಾರೆಯೇ, ಕಳ್ಳತನವಾದ ವಸ್ತುಗಳು ಅಥವಾ ಹಣದ ಸುಳಿವು, ಘಟನೆಯಲ್ಲಿ ಬಳಸಿದ ವಾಹನ ಅಥವಾ ಇತರೆ ಸಾಕ್ಷ್ಯಾಧಾರಗಳ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಹೀಗಾಗಿ ಈ ಪ್ರಕರಣದಲ್ಲಿ ಇನ್ನಷ್ಟು ಮಾಹಿತಿ ಹಾಗೂ ತನಿಖೆಯ ಅಧಿಕೃತ ವಿವರಗಳನ್ನು ಪೊಲೀಸರು ಇನ್ನೂ ಬಹಿರಂಗಪಡಿಸಿಲ್ಲ.

## ಸಂಡೆ ಬಜಾರ್ ವ್ಯಾಪಾರಕ್ಕೆ ಮುಕ್ತ ಅವಕಾಶ

• ಉದಯವಾಹಿನಿ, ಮಂಗಳೂರು:

ನಗರದ ಪುರಭವನದ ಬಳಿ ವರ್ಷಗಳಿಂದ ನಡೆದುಕೊಂಡು ಬರುತ್ತಿದ್ದ ವಾರದ ರಜಾದಿನದ 'ಸಂಡೇ ಬಜಾರ್' ವ್ಯಾಪಾರಸ್ಥರನ್ನು ಮಂಗಳೂರು ಮಹಾನಗರ ಪಾಲಿಕೆ ತೆರವುಗೊಳಿಸುತ್ತಿರುವುದಕ್ಕೆ ವ್ಯಾಪಾರಿಗಳಿಂದ ತೀವ್ರ ವಿರೋಧ ವ್ಯಕ್ತವಾಗಿತ್ತು. ಈ ಹಿನ್ನೆಲೆಯಲ್ಲಿ ಸಂಡೇ ಬಜಾರ್ ವ್ಯಾಪಾರಕ್ಕೆ ಮುಕ್ತ ಅವಕಾಶ ಕಲ್ಪಿಸಿಕೊಡಬೇಕೆಂದು ಆಗ್ರಹಿಸಿ ದಕ್ಷಿಣ ಕನ್ನಡ ಜಿಲ್ಲಾ ಬೀದಿಬದಿ ವ್ಯಾಪಾರಸ್ಥರ ಸಂಘವು ಸಲ್ಲಿಸಿದ್ದ ಮನವಿಗೆ ಜಿಲ್ಲಾ ಉಸ್ತುವಾರಿ ಸಚಿವ ಯು. ಟಿ. ಖಾದರ್ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಬೀದಿಬದಿ ವ್ಯಾಪಾರಸ್ಥರ ಸಂಘದ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಉಸ್ತುವಾರಿ ಸಚಿವರು, ಸಂಡೇ ಬಜಾರ್ ವ್ಯಾಪಾರಸ್ಥರ ಅಹವಾಲುಗಳನ್ನು ಆಲಿಸಿದರು. ಬಳಿಕ ಮಂಗಳೂರು ಮಹಾನಗರ ಪಾಲಿಕೆ ಆಯುಕ್ತರಿಗೆ ದೂರವಾಣಿ ಮೂಲಕ ನೇರ ಸೂಚನೆ ನೀಡಿದ ಸಚಿವರು, ಸಂಡೇ ಬಜಾರ್ ಎಂಬುದು ವಾರದ ಒಂದು ದಿನಕ್ಕಷ್ಟೇ ಸೀಮಿತವಾಗಿರುವ ವ್ಯಾಪಾರ ಚಟುವಟಿಕೆಯಾಗಿದೆ. ವ್ಯಾಪಾರಸ್ಥರಲ್ಲಿ ಏನಾದರೂ ಲೋಪದೋಷಗಳಿದ್ದರೆ ಅದನ್ನು ಸರಿಪಡಿಸಲು ಕ್ರಮ ಕೈಗೊಳ್ಳಬೇಕೇ ಹೊರತು, ಸಣ್ಣಪುಟ್ಟ ಕಾರಣಗಳಿಗೆ ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸುವ ಕಠಿಣ ಕ್ರಮಗಳ ಅಗತ್ಯವಿಲ್ಲ, ಎಂದು ಸ್ಪಷ್ಟಪಡಿಸಿದರು. ಅಲ್ಲದೆ, ಈ ವಿಷಯವಾಗಿ ತಕ್ಷಣವೇ ತಮ್ಮ ಸಮ್ಮುಖದಲ್ಲಿಯೇ ವಿಶೇಷ ಸಭೆಯೊಂದನ್ನು ನಿಗದಿಪಡಿಸುವಂತೆ ಆಯುಕ್ತರಿಗೆ ನಿರ್ದೇಶನ ನೀಡಿದರು.

## ಎಸ್ಐಆರ್ ಅರ್ಜಿ ಭರ್ತಿ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರ

• ಉದಯವಾಹಿನಿ, ಬೀದರ್:

ಎಸ್ಐಆರ್ ಯೋಜನೆಯ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುವಂತೆ ಅಧಿಕಾರಿಗಳು .ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ರಾಘವೇಂದ್ರ ಉಪಾಧ್ಯೆ ಹಿರಿಯ ಸಿವಿಲ್ ನ್ಯಾಯಾಧೀಶರು ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ ರವರು ಹೇಳಿದರು.

ಎಸ್ಐಆರ್ ಯೋಜನೆಯ ಕುರಿತು ಅರಿವು ಮೂಡಿಸುವ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಅಗತ್ಯವಾದ ಮಾಹಿತಿ ಮಾರ್ಗದರ್ಶನ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಾರ್ವಜನಿಕರಿಗೆ ಯೋಜನೆಯ ಬಗ್ಗೆ ಸೂಕ್ತ ಮಾಹಿತಿ ನೀಡಿ, ಅರ್ಹ ಫಲಾನುಭವಿಗಳಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಸಹಕಾರ ಒದಗಿಸಬೇಕು. ಎದುರಾಗುವ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಿ, ಸರ್ಕಾರದ ಆಶಯದಂತೆ ಯೋಜನೆಯ ಸೌಲಭ್ಯಗಳು ಜನರಿಗೆ ತಲುಪುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

# ಮಾಹಿತಿಯನ್ನು ಕೇಳಿದ ತಕ್ಷಣ ವರದಿ ನೀಡಬೇಕು ಅಧ್ಯಕ್ಷೆ ರೇಷ್ಮಾ

### 15ದಿನ ಸಮಯ ನೀಡಿ ಮಾಹಿತಿ ಸಂಪೂರ್ಣ ನೀಡುತ್ತೇವೆ ಎಂದು ಸದಸ್ಯರಿಗೆ ಸಮಜಾಯಿಸಿ ಉತ್ತರ ನೀಡಲು ಮುಂದಾದರು

• ಉದಯವಾಹಿನಿ, ಹಗರಿಬೊಮ್ಮನಹಳ್ಳಿ :

ಪಟ್ಟಣದ ಪುರಸಭೆಯ ಸಭಾಂಗಣದಲ್ಲಿ ಕಳೆದ ವಾರ ಜು.15ರಂದು ನಡೆದ ಸಾಮಾನ್ಯ ಸಭೆಯು ಮೊಟಕುಗೊಂಡಿದ್ದು, ಚರ್ಚೆಯಾಗಬೇಕಿದ್ದ ಸಾಕಷ್ಟು ವಿಷಯಗಳು ಮತ್ತು ಕೆಲಸಕ್ಕೆ ಅನುಮೋದನೆಗಾಗಿ ಮತ್ತೇ ಸಾಮಾನ್ಯ ಸಭೆ ಕರೆಯಲಾಯಿತು.

ಸಭೆಯಲ್ಲಿ ಪಾಲ್ಗೊಂಡಿದ್ದ ಸದಸ್ಯ ದೀಪಕ್ ಸಾ ಕಠಾರೆ ಮಾತನಾಡಿ, ಪಟ್ಟಣದಲ್ಲಿ ಕುಡಿಯುವ ನೀರಿನ ಯೋಜನೆಗೆ 9ಕೋಟಿ ರೂ.ಜಾರಿಯಾಗಿದ್ದು, ಈಗಾಗಲೇ ಯೋಜನೆ ಕೂಡ ತಯಾರಿಸಿದ್ದು, ಯೋಜನೆ ಹಳ್ಳ ಹಿಡಿದಿದೆಯೇ? ಎನ್ನುವ ಅನುಮಾನ ಕಾಡುತ್ತಿದೆ. ಪಟ್ಟಣದಲ್ಲಿ ಕೇಂದ್ರ ಸರ್ಕಾರದ

> 1: ಯೋಜನೆ ಹಳ್ಳ ಹಿಡಿದಿದೆಯೇ?
> 2: ಮಾಂಸದ ಮಾರುಕಟ್ಟೆ ಎಲ್ಲಿ
> 3: ಸಭೆಗೆ ಬರುವ ಮುನ್ನ ವಿಷಯ

ಅಮೃತ್ ಯೋಜನೆಯ ಕಾಮಗಾರಿ ನಡೆಯುತ್ತಿದೆ. ಹಾಗಾದರೆ ಪಟ್ಟಣದಲ್ಲಿಯೇ ಅದೆಷ್ಟು ಕುಡಿಯುವ ನೀರಿನ ಯೋಜನೆ ಕೈಗೊಳ್ಳಲಾಗಿದೆ ಲೆಕ್ಕ ನೀಡಿ ಎಂದು ಪಟ್ಟು ಹಿಡಿದರು. ಪುರಸಭೆ ಅಧಿಕಾರಿಗಳು ವರದಿ ಕೊಡುವಲ್ಲಿ ತಡವರಿಸುತ್ತಾ ದಾಖಲಾತಿಗಳನ್ನು ಕೆದಕುತಿದ್ದರು. ಬಳಿಕ ಮುಖ್ಯಾಧಿಕಾರಿ ಎಂ.ಕೆ.ಮುಗಳಿ ಇನ್ನು 15ದಿನ ಸಮಯ ನೀಡಿ ಮಾಹಿತಿ ಸಂಪೂರ್ಣ ನೀಡುತ್ತೇವೆ ಎಂದು ಸದಸ್ಯರಿಗೆ ಸಮಜಾಯಿಸಿ ಉತ್ತರ ನೀಡಲು ಮುಂದಾದರು. ಕೂಡಲೇ ಅಧ್ಯಕ್ಷೆ ರೇಷ್ಮ ಸಿಕಂದರ್ ಮಾತನಾಡಿ, ಸಭೆಗೆ ಬರುವ ಮುನ್ನು ವಿಷಯಕ್ಕೆ ತಕ್ಕಂತೆ ಸಂಪೂರ್ಣ ಮಾಹಿತಿ ಇಲ್ಲದೆ ಏಕೆ ಬರುತ್ತೀರಿ ಎಂದು ತರಾಟೆಗೆ ತೆಗೆದುಕೊಂಡರು. ರೆವೆನ್ಯೂ ಜನರೇಟರ್ ಆಗುವಂತಹ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾಯೋಜನೆ ರೂಪಿಸುವಂತೆ ಡಿಸಿ ಕಚೇರಿ ಯಿಂದ ಮಾಹಿತಿ ಬಂದಿದೆ ಎಂದು ಮುಖ್ಯಾಧಿಕಾರಿ ಎಂ ಕೆ ಮುಗಳಿ ಮಾತನಾಡುತ್ತಿರುವಾಗ ಪುರಸಭೆಯ ಸದಸ್ಯ ಪವಾಡಿ ಹನುಮಂತಪ್ಪ ಮಧ್ಯಪ್ರವೇಶಿಸಿ ಅಂಬೇಡ್ಕರ್ ಸರ್ಕಲ್ ಸುತ್ತ ಮುತ್ತ ಮಳಿಗೆಗಳನ್ನು ನಿರ್ಮಿಸಿದರೆ ಆದಾಯ ಬರುತ್ತದೆ ಎಂದರು. ಇದಕ್ಕೆ ಮುಖ್ಯಾಧಿಕಾರಿ ಮಳಿಗೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.ಮಾಂಸದ ಮಾರುಕಟ್ಟೆ ಎಲ್ಲಿ ಮಾಡುತ್ತೀರಿ ಎಂದು ಸದಸ್ಯ ಗಂಗಣ್ಣ ಪ್ರಶ್ನಿಸಿದರು.ಚಿಕನ್ ಮಟನ್ ಹಾಗೂ ಫಿಶ್ ಎಲ್ಲಾ ಒಂದು ಕಡೆ ಮಾರಾಟ ಮಾಡುವಂತ ಮಳಿಗೆ ನಿರ್ಮಿಸಲಾಗುವುದು ಎಂದರು.

ಪಟ್ಟಣದ ಹಳೇ ಊರಿನ ಸಮುದಾಯ ಭವನವನ್ನು ಕೆಡವಿ ಮಳಿಗೆ ಮತ್ತು ಭವನ ನಿರ್ಮಿಸಲು ನಗರಾಭಿವೃದ್ಧಿ ಯೋಜನೆಯಲ್ಲಿ 20ಕೋಟಿ ರೂ.ಗಳಿಗೆ ಕಳಿಸಿಕೊಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು.

ಈ ವೇಳೆ ತಾಲ್ಲೂಕು ಪ್ರಮುಖ ಇಲಾಖೆಗಳ ಅಧಿಕಾರಿಗಳು ಹಾಗೂ ಪುರಸಭೆಯ ಸದಸ್ಯರು ಮತ್ತೇ ಗೈರಾಗಿದ್ದರು. ಪುರಸಭೆಯ ಉಪಾಧ್ಯಕ್ಷೆ ನೇತ್ರಾವತಿ ಹುಚ್ಚಪ್ಪ, ಸದಸ್ಯರಾದ ಅಂಬಿಕಾ ದೇವೇಂದ್ರ, ಮಲ್ಲೇಶ್ವರಿ ಭರತ್, ಖಾಜಾಬನ್ನಿ ಅಲ್ಲಾಭಕ್ಷಿ, ಮಂಜುಳಾ ಕೃಷ್ಣಾನಾಯ್ಕ್, ನವೀನ್ ಕುಮಾರ, ಅಜೀಜುಲ್ಲಾ, ನೆಲ್ಲು ಇಸ್ಮಾಯಿಲ್, ನಾಮನಿರ್ದೇಶಕರಾದ ತ್ಯಾವಣಿಗಿ ಕೊಟ್ರೇಶ, ಮಂಜುನಾಥ, ಬಾಳಪ್ಪ ಮತ್ತಿತರರು ಇದ್ದರು.



ಉದಯವಾಹಿನಿ ಚಿತ್ರ

> ಪಟ್ಟಣದಲ್ಲಿ ಗ್ಯಾಸ್ ಪೈಪ್ಲೈನ್ ನಡೆಯುತ್ತಿದೆ ಅವಧಿ ಮುಗಿದು ಎರಡು ತಿಂಗಳಾದರೂ ಮತ್ತೆ ಬರವಣಿಗೆ ತೆಗೆದುಕೊಂಡಿಲ್ಲ. ಎಲ್ಲಂದರಲ್ಲಿ ರಸ್ತೆಗಳನ್ನು ಬಗೆದು ಹಾಳಾಗುತ್ತಿವೆ. ಗುಂಡಿಗಳು ಬಿದ್ದಿವೆ, ಜನರಿಗೆ ಸೌಲಭ್ಯಕ್ಕಿಂತ ತೊಂದರೆಯಾಗುತ್ತಿದೆ ಎಂದು ಆರೋಪಿಸಿದರು. ಮುಖ್ಯಾಧಿಕಾರಿ ಮುಗಳಿ ಪ್ರತಿಕ್ರಿಯಿಸಿ, ಅಧಿಕಾರಿಗಳು ಸಭೆಗೆ ಕರೆದರೂ ಬಂದಿಲ್ಲ, ಪುರಸಭೆಯತ್ತ ಬರುತ್ತಿಲ್ಲ ಎಂದರು. ತಕ್ಷಣ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ತಿಳಿಸಿದರು.
> -ಅಧ್ಯಕ್ಷೆ ರೇಷ್ಮ ತಿಳಿಸಿದರು.

> ಅಲ್ಲದೆ, ಅದೇ ಸ್ಥಳದಲ್ಲಿ ನಾಮಫಲಕ ಹಾಕುವಂತೆ ಒತ್ತಾಯಿಸಿದರು. ಮುಖ್ಯಾಧಿಕಾರಿ ಪ್ರತಿಕ್ರಿಯಿಸಿ, ಪಟ್ಟಣದಲ್ಲಿ ಕೆಲ ವೃತ್ತಗಳಿಗೆ ನಾಮಕರಣ ಮಾಡಲು ಮನವಿಗಳು ಬಂದಿವೆ. ಆದ್ದರಿಂದ ಶೀಘ್ರದಲ್ಲೇ ವಿಶೇಷ ಸಭೆಯ ಮೂಲಕ ನಿರ್ಣಯಗಳನ್ನು ತೆಗೆದುಕೊಳ್ಳಲಾಗುವುದು ಎಂದರು.
> -ದೀಪಕ್ ಸಾ ಕಠಾರೆ

## ಗೃಹಲಕ್ಷ್ಮಿ ದಿನಾಚರಣೆ : ಗಿಡ ನೆಟ್ಟು -ಸಿಹಿ ಹಂಚಿ ಸಂಭ್ರಮಾಚರಣೆ

• ಉದಯವಾಹಿನಿ, ಬಸವನಬಾಗೇವಾಡಿ:

ಆರ್ಥಿಕವಾಗಿ ಸಬಲ ಮಹಿಳೆ, ಸಬಲ ಕುಟುಂಬ, ಸಬಲ ರಾಷ್ಟ್ರ ನಿರ್ಮಾಣವೇ ಗೃಹಲಕ್ಷ್ಮಿ ದಿನದ ಗುರಿಯಾಗಿದೆ. ಎಂದು ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ ಅಭಿಪ್ರಾಯಪಟ್ಟರು.

ತಾಲ್ಲೂಕ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ವತಿಯಿಂದ ಗುರುವಾರ ಬೆಳಿಗ್ಗೆ ಪಟ್ಟಣದ ತಾಲ್ಲೂಕ ಪಂಚಾಯತ ಆವರಣದಲ್ಲಿ ಗೃಹಲಕ್ಷ್ಮಿ ದಿನಾಚರಣೆ ಅಂಗವಾಗಿ ಗಿಡ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿ, ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಪ್ರಾಮಾಣಿಕವಾಗಿ ಮುಟ್ಟಿಸುವಲ್ಲಿ ತಾಲ್ಲೂಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕಾರ್ಯ ನಿರ್ವಹಿಸುತ್ತಿದೆ ಎಂದರು.

ತಾಲ್ಲೂಕ ಶಿಶು ಅಭಿವೃದ್ಧಿ ಅಧಿಕಾರಿ ಶಿಲ್ಪಾ ಹಿರೇಮಠ ಮಾತನಾಡಿ,ಈ ಯೋಜನೆಯ ಯಶಸ್ಸನ್ನು ಆಚರಿಸಲು ಗೃಹಲಕ್ಷ್ಮಿ ದಿನಾಚರಣೆ ಆಚರಿಸಲಾಗುತ್ತದೆ. ಮಹಿಳೆಯರ ಆರ್ಥಿಕ ಸ್ವಾತಂತ್ರ್ಯ ಮತ್ತು ಗೌರವವನ್ನು ಸ್ಮರಿಸಲಾಗುತ್ತದೆ. ಮನೆಯ ಖರ್ಚು, ಮಕ್ಕಳ ಶಿಕ್ಷಣ, ಆರೋಗ್ಯಕ್ಕೆ ಈ ಹಣ ನೆರವಾಗುತ್ತಿದೆ ಎಂದರು.ಯುವ ಮುಖಂಡರಾದ ಸಂಗಮೇಶ ಒಲೇಕಾರ ಮಾತನಾಡಿ, ಈ ಯೋಜನೆಯಿಂದ ಲಕ್ಷಾಂತರ ಮಹಿಳೆಯರ ಜೀವನದಲ್ಲಿ ಬದಲಾವಣೆ ಆಗಿದೆ. ಮಹಿಳೆಯರು ಸಣ್ಣ ಉದ್ಯೋಗ, ಉಳಿತಾಯ ಮಾಡಲು ಈ ಹಣ ಉಪಯೋಗಿಸುತ್ತಿದ್ದಾರೆ ಎಂದರು. ತಾಲ್ಲೂಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮೈಬೂಬ. ಲಾ.ನಾಯ್ಕೋಡಿ, ಮಾತನಾಡಿ, ಈ ಯೋಜನೆ ಮಹಿಳೆಯರ ಆತ್ಮವಿಶ್ವಾಸವನ್ನು ಹೆಚ್ಚಿಸಿದೆ. ಅರ್ಹ ಮಹಿಳೆಯರು ಯಾರೂ ವಂಚಿತರಾಗಬಾರದು ಎಂಬುದು ಸರ್ಕಾರದ ಉದ್ದೇಶ ಎಂದರು.

ಗೃಹಲಕ್ಷ್ಮಿ ಯೋಜನೆ ದೇಶಕ್ಕೇ ಮಾದರಿಯಾಗಿದೆ ಎಂದು ನ್ಯಾ.ರವಿ ರಾಠೋಡ ಹೇಳಿದರು. ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕ ಅಧ್ಯಕ್ಷೆ ರುಕ್ಮಿಣಿ ರಾಠೋಡ ಮಾತಾನಾಡಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ವಾಯ್. ಎಸ್ ಸೋಮನಕಟ್ಟಿ, ಪುರಸಭೆ ಅಧಿಕಾರಿ ಶಬ್ಬೀರ ರೇವೂರಕರ, ವೀರೇಶ ಸರಶೆಟ್ಟಿ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಸುರೇಶ ಹಾರಿವಾಳ, ಜಿಲ್ಲಾ ಸಮಿತಿ ಉಪಾಧ್ಯಕ್ಷ ಆನಂದ ಜಾಧವ, ನಗರ ಘಟಕ ಅಧ್ಯಕ್ಷ ಸುರೇಶಗೌಡ ಪಾಟೀಲ, ಸಂಗಯ್ಯ ಕಾಳಹಸ್ತೇಶ್ವರಮಠ ತಾಲೂಕು ಗ್ಯಾರಂಟಿ ಯೋಜನೆಗಳ ಸಮಿತಿ ಸದಸ್ಯರು,ಅಧಿಕಾರಿಗಳು,ಕಾಂಗ್ರೇಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಜನ ಪ್ರತಿನಿಧಿಗಳು ಹಾಜರಿದ್ದರು. ನಂತರ ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.


ಉದಯವಾಹಿನಿ ಚಿತ್ರ

> ತಾಲ್ಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ಅದರಲ್ಲೂ ಗ್ರಾಮೀಣ ಮಹಿಳೆಯರ ಆರ್ಥಿಕ ಸ್ಥಿತಿ ಸುಧಾರಿಸಿದೆ. ಈ ಹಣವನ್ನು ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ಸಣ್ಣ ವ್ಯಾಪಾರಕ್ಕೆ ಮಹಿಳೆಯರು ಬಳಸುತ್ತಿದ್ದಾರೆ.ಈ ಯೋಜನೆಯಿಂದ ಮಹಿಳೆಯರಲ್ಲಿ ಆತ್ಮವಿಶ್ವಾಸ ಮತ್ತು ಸ್ವಾವಲಂಬನೆ ಹೆಚ್ಚಾಗಿದೆ. ಮೈಬೂಬ ಲಾ. ನಾಯ್ಕೋಡಿ, ಅಧ್ಯಕ್ಷರು, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ.

## ಮಹಿಳಾ ಮೀಸಲಾತಿಯನ್ನು ತಕ್ಷಣ ಜಾರಿಗೊಳಿಸಲು ಒಕ್ಕೂಟದ ಆಗ್ರಹ

• ಉದಯವಾಹಿನಿ, ಬಳ್ಳಾರಿ.-

ದೇಶದ ವಿವಿಧ ಭಾಗಗಳ ಮಹಿಳಾ ಸಂಘಟನೆಗಳು ಒಂದಾಗಿ ರಾಷ್ಟ್ರೀಯ ಮಹಿಳಾ ಮೀಸಲಾತಿ ಒಕ್ಕೂಟವನ್ನು ರಚಿಸಿ, ಶಾಸನ ಸಭೆಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿಯನ್ನು ಕಲ್ಪಿಸುವ ಸಂವಿಧಾನದ 106 ನೇ ತಿದ್ದುಪಡಿಯನ್ನು ಇತರ ಷರತ್ತುಗಳನ್ನು ತೆಗೆದುಹಾಕುವ ತಿದ್ದುಪಡಿ ಮಾಡಿ ತಕ್ಷಣ ಜಾರಿಗೊಳಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಆಗ್ರಹಿಸಿವೆ.ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಈ ಕಾಯ್ದೆಯ ಜಾರಿಯನ್ನು ಜನಗಣತಿ ಹಾಗೂ ಕ್ಷೇತ್ರ ಪುನರ್ವಿಂಗಡನೆ ಪ್ರಕ್ರಿಯೆಗಳೊಂದಿಗೆ ಜೋಡಿಸಿರುವ ಷರತ್ತುಗಳನ್ನು ತೆಗೆದುಹಾಕಿ, ಯಾವುದೇ ವಿಳಂಬವಿಲ್ಲದೆ ಜಾರಿಗೊಳಿಸಬೇಕು ಎಂಬುದು ಒಕ್ಕೂಟದ ಪ್ರಮುಖ ಬೇಡಿಕೆಯಾಗಿದೆ.

ಕಳೆದ ಒಂದು ತಿಂಗಳಿನಿಂದ ಕರ್ನಾಟಕದಲ್ಲಿ ರಾಷ್ಟ್ರೀಯ ಮಹಿಳಾ ಮೀಸಲಾತಿ ಒಕ್ಕೂಟವು ರಾಜ್ಯದಾದ್ಯಂತ ಜನಾಭಿಪ್ರಾಯವನ್ನು ರೂಪಿಸುವ ಅಭಿಯಾನ ನಡೆಸುತ್ತಿದೆ. ಸಮುದಾಯ ಸಭೆಗಳು, ಸಾರ್ವಜನಿಕ ಸಭೆಗಳು, ರಾಜಕೀಯ ಮುಖಂಡರು, ಗಣ್ಯ ವ್ಯಕ್ತಿಗಳು, ಸಾಹಿತಿಗಳು, ಸಮಾಜಮುಖಿ ಚಿಂತಕರು ಹಾಗೂ ವಿವಿಧ ಕ್ಷೇತ್ರಗಳ ಪ್ರಮುಖರನ್ನು ಭೇಟಿ ಮಾಡಿ ಈ ಬೇಡಿಕೆಗೆ ಬೆಂಬಲ ಕೋರಲಾಗಿದೆ. ರಾಜ್ಯದ ನಾನಾ ಭಾಗಗಳಿಂದ ಸಾವಿರಾರು ನಾಗರಿಕರು ಈ ಅಭಿಯಾನಕ್ಕೆ ತಮ್ಮ ಬೆಂಬಲ ಸೂಚಿಸಿದ್ದಾರೆ.

ಈ ಹೋರಾಟವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರಾಜ್ಯದಾದ್ಯಂತ ಸಾರ್ವಜನಿಕ ಪ್ರತಿಭಟನೆ ನಡೆಸಲು ಒಕ್ಕೂಟ ನಿರ್ಧರಿಸಿದೆ.

## ಸೋಲಾರ್ ವಿಂಡ್ ವಿದ್ಯುತ್ ಯೋಜನೆಗಳ ಸಂಬಂಧ ಕಲ್ಪಿಸಿ ಬೇರೆ ಬಣ್ಣ ಬಳಿಯುವುದು ಸರಿಯಲ್ಲ: ಮಂಜುನಾಥ ಗಟ್ಟೆಪ್ಪನವರ

• ಉದಯವಾಹಿನಿ, ಯಲಬುರ್ಗಾ:

ಕುಕನೂರು ತಾಲ್ಲೂಕಿನ ಕುದರಿಮೋತಿ ಗ್ರಾಮದಲ್ಲಿ ಸಿಸಿ ರಸ್ತೆ ಕಾಮಗಾರಿ ವಿಚಾರವಾಗಿ ನಡೆದ ಘಟನೆಗೆ ಸೋಲಾರ್ ಹಾಗೂ ವಿಂಡ್ ವಿದ್ಯುತ್ ಯೋಜನೆಗಳೊಂದಿಗೆ ಸಂಬಂಧ ಕಲ್ಪಿಸಿ ಅನಗತ್ಯವಾಗಿ ಬೇರೆ ಬಣ್ಣ ಬಳಿಯುವುದು ಸರಿಯಲ್ಲ ಎಂದು ಮುಖಂಡ ಮಂಜುನಾಥ ಗಟ್ಟೆಪ್ಪನವರ ಆಗ್ರಹಿಸಿದರು.

ಪಟ್ಟಣದ ಪತ್ರಿಕಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುದರಿಮೋತಿ ಗ್ರಾಮದ ಹಿರೇಮಸೂತಿಯಿಂದ ಮೊರಾರ್ಜಿ ದೇಸಾಯಿ ವಸತಿ ಶಾಲೆಯವರೆಗೆ ಸಿಸಿ ರಸ್ತೆ ಕಾಮಗಾರಿ ಸರ್ಕಾರದ ನಿಯಮಾನುಸಾರ ನಡೆಯುತ್ತಿದೆ. ಇದು ಸಂಪೂರ್ಣವಾಗಿ ರಸ್ತೆ ಕಾಮಗಾರಿಗೆ ಸಂಬಂಧಿಸಿದ ವಿವಾದವಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ತಪ್ಪು ಮಾಹಿತಿ ಹರಡುವುದನ್ನು ನಿಲ್ಲಿಸಬೇಕು.

ಈ ರಸ್ತೆ ನಿರ್ಮಾಣದಿಂದ ಗ್ರಾಮಸ್ಥರು, ರೈತರು ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದ್ದು, ಹಲವು ವರ್ಷಗಳ ಬೇಡಿಕೆ ಈಡೇರುವಂತಾಗಿದೆ. ರಸ್ತೆ ನಿರ್ಮಾಣ ಪೂರ್ಣಗೊಂಡರೆ ಗ್ರಾಮದಲ್ಲಿ ಸಂಚಾರ ವ್ಯವಸ್ಥೆ ಮತ್ತಷ್ಟು ಸುಗಮವಾಗಲಿದೆ ಎಂದು ಹೇಳಿದರು.

ಶಂಕರಗೌಡ ಹಾಗೂ ಅವರ ಕುಟುಂಬದ ಸದಸ್ಯರು ಕಾಮಗಾರಿಗೆ ಅಡ್ಡಿಪಡಿಸಿದ್ದರಿಂದ ಸುಮಾರು ಮೂರು ತಿಂಗಳ ಕಾಲ ರಸ್ತೆ ಕಾಮಗಾರಿ ಸ್ಥಗಿತಗೊಂಡಿತ್ತು ಎಂದು ಆರೋಪಿಸಿದ ಅವರು, ಸರ್ವೆ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಅಳತೆ ಕಾರ್ಯ ನಡೆಸಿದ ಬಳಿಕವೂ ಕಾಮಗಾರಿ ಮುಂದುವರಿಸಲು ಅವಕಾಶ ನೀಡಲಿಲ್ಲ. ಇದರಿಂದ ಕಾಮಗಾರಿ ವಿಳಂಬವಾಗಿ ಸಾರ್ವಜನಿಕರು, ರೈತರು ಹಾಗೂ ವಿದ್ಯಾರ್ಥಿಗಳು ತೊಂದರೆ ಅನುಭವಿಸುವಂತಾಯಿತು ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯಿತಿ ಇಂಜಿನಿಯರಿಂಗ್ ಇಲಾಖೆಯ ಅಧಿಕಾರಿಗಳು ಬೇವೂರು ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದು, ಸಮಸ್ಯೆಯನ್ನು ಶಾಂತಿಯುತವಾಗಿ ಬಗೆಹರಿಸುವ ಉದ್ದೇಶದಿಂದ ಪಿಎಸ್ಐ ಗುರುರಾಜ ಸ್ಥಳಕ್ಕೆ ಭೇಟಿ ನೀಡಿದ್ದರು. ಈ ವೇಳೆ ಶಂಕರಗೌಡ ಹಾಗೂ ಅವರ ಕುಟುಂಬದವರು ಪಿಎಸ್ಐ ಅವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ಕರ್ತವ್ಯ ನಿರ್ವಹಣೆಗೆ ಅಡ್ಡಿಪಡಿಸಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ಇತ್ತೀಚೆಗೆ ಈ ಘಟನೆಯನ್ನು ಕೆಲವರು ಸಾಮಾಜಿಕ ಜಾಲತಾಣಗಳಲ್ಲಿ ಸೋಲಾರ್ ಹಾಗೂ ವಿಂಡ್ ಪವರ್ ಯೋಜನೆಗಳಿಗೆ ಸಂಬಂಧಿಸಿ ತಪ್ಪು ರೀತಿಯಲ್ಲಿ ಬಿಂಬಿಸುತ್ತಿದ್ದಾರೆ. ಶಾಸಕ ಬಸವರಾಜ ರಾಯರಡ್ಡಿ ಹಾಗೂ ಪಿಎಸ್ಐ ಗುರುರಾಜ ಅವರ ಹೆಸರನ್ನು ಅನಗತ್ಯವಾಗಿ ಎಳೆದು ತಂದು ಗೊಂದಲ ಸೃಷ್ಟಿಸಲಾಗುತ್ತಿದೆ. ವಾಸ್ತವವಾಗಿ ಕುದರಿಮೋತಿ ಗ್ರಾಮದಲ್ಲಿ ಯಾವುದೇ ಸೋಲಾರ್ ಅಥವಾ ವಿಂಡ್ ಪವರ್ ಕಾಮಗಾರಿಗಳು ನಡೆಯುತ್ತಿಲ್ಲ. ಆದ್ದರಿಂದ ರಸ್ತೆ ಕಾಮಗಾರಿ ವಿವಾದಕ್ಕೆ ಬೇರೆ ಬಣ್ಣ ಬಳಿದು ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡಬಾರದು ಎಂದು ಮಂಜುನಾಥ ಗಟ್ಟೆಪ್ಪನವರ ಹೇಳಿದರು.

ಗುತ್ತಿಗೆದಾರ ಬಸವರಾಜ ಹನುಮನಟ್ಟಿ ಮಾತನಾಡಿ, ಕಾಮಗಾರಿಗೆ ಅಡ್ಡಿಪಡಿಸಿದ್ದರಿಂದ ಸುಮಾರು ಮೂರು ತಿಂಗಳ ಕಾಲ ರಸ್ತೆ ನಿರ್ಮಾಣ ಕಾರ್ಯ ಸ್ಥಗಿತಗೊಂಡಿತ್ತು. ಇದರಿಂದ ಸಾರ್ವಜನಿಕರು, ರೈತರು ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಯಿತು. ಸಮಸ್ಯೆ ನಿವಾರಣೆಯಾದ ನಂತರ ಕಾಮಗಾರಿ ಪುನರಾರಂಭಗೊಂಡಿದ್ದು, ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ಶಂಕರಗೌಡ ಅವರ ಕುಟುಂಬದಿಂದ ಜೀವ ಬೆದರಿಕೆ ಎದುರಾಗಿರುವ ಹಿನ್ನೆಲೆಯಲ್ಲಿ ತಮ್ಮ ಸುರಕ್ಷತೆಗಾಗಿ ಪೊಲೀಸ್ ಇಲಾಖೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಮನವಿ ಮಾಡಿದರು. ಈ ಸಂದರ್ಭ ಸುದ್ದಿ ಗೋಷ್ಠಿ ಯಲ್ಲಿ ಭಾಗವಹಿದ ದುರಗಪ್ಪ ಕಾಳಿ, ಸುಭಾಷ ಈಳಿಗೇರ, ಮರಿಯಪ್ಪ ಕೆಂಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

## ಮತದಾರರ ಪಟ್ಟಿಯಲ್ಲಿ ಹೆಸರು ಉಳಿಸಿಕೊಳ್ಳಿ; ಶಾಸಕ ಬಸನಗೌಡ ಪಾಟೀಲ ಯತ್ನಾಳ

• ಉದಯವಾಹಿನಿ, ವಿಜಯಪುರ, :


ಮತದಾರರ ಪಟ್ಟಿಯಲ್ಲಿ ಪ್ರತಿಯೊಬ್ಬ ಅರ್ಹ ಮತದಾರರ ಹೆಸರನ್ನು ಉಳಿಸಿಕೊಳ್ಳುವುದು ಅತ್ಯಂತ ಮಹತ್ವದ್ದಾಗಿದ್ದು, ಎಸ್ಐಆರ್ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬರೂ ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಹಾಗೂ ಕುಟುಂಬದ ಸದಸ್ಯರ, ನೆರೆಹೊರೆಯವರ ಮತ್ತು ಸಂಬಂಧಿಕರ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕರೆ ನೀಡಿದರು.

ನಗರದ ಶ್ರೀ ಸಿದ್ದೇಶ್ವರ ಸಂಸ್ಥೆಯ ಶಿವಾನುಭವ ಮಂಟಪದಲ್ಲಿ ನಡೆದ ಹಿಂದೂ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ವಿಜಯಪುರ ನಗರ ಮತಕ್ಷೇತ್ರದ ರಾಜಕೀಯ ಸಮೀಕರಣವನ್ನು ಬದಲಾಯಿಸುವ ಪ್ರಯತ್ನಗಳು ನಡೆಯುತ್ತಿವೆ ಎಂದು ಆರೋಪಿಸಿದರು.

ಎಸ್ಐಆರ್ ಪ್ರಕ್ರಿಯೆಗೆ ಕೆಲವರು ಉದ್ದೇಶಪೂರ್ವಕವಾಗಿ ಅಡ್ಡಿಪಡಿಸಲು ಯತ್ನಿಸುತ್ತಿದ್ದು, ವಿಜಯಪುರದಲ್ಲಿ ಯಾವುದೇ ರೀತಿಯ ಗೂಂಡಾಗಿರಿಗೆ ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಕಾರ್ಯಕರ್ತರು ಯಾವುದೇ ಒತ್ತಡಕ್ಕೆ ಮಣಿಯದೆ ಧೈರ್ಯದಿಂದ ನಿಲ್ಲಬೇಕು. ಮತದಾರರಿಗೆ ಅಗತ್ಯ ಮಾಹಿತಿ ನೀಡಿ, ಎಸ್ಐಆರ್ ಪ್ರಕ್ರಿಯೆ ಪೂರ್ಣಗೊಳಿಸಲು ಸಹಾಯ ಮಾಡುವುದು ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರ ಜವಾಬ್ದಾರಿಯಾಗಿದೆ ಎಂದು ಹೇಳಿದರು.ಕುಟುಂಬದ ಸದಸ್ಯರು, ನೆರೆಹೊರೆಯವರು, ಸಮಾಜದ ಬಂಧುಗಳು ಎಸ್ಐಆರ್ ಪ್ರಕ್ರಿಯೆ ಪೂರ್ಣಗೊಳಿಸಿದ್ದಾರೆಯೇ ಎಂಬುದನ್ನು ಪರಿಶೀಲಿಸಿ, ಮಾಡಿಸದವರಿಗೆ ನೆರವು ನೀಡುವಂತೆ ಅವರು ಸಲಹೆ ನೀಡಿದರು.

ಪಶ್ಚಿಮ ಬಂಗಾಳದಲ್ಲಿ ಹಿಂದೆ ಬಿಜೆಪಿ ಬೆಂಬಲಿಗರ ಮೇಲೆ ದೌರ್ಜನ್ಯ ನಡೆದಿತ್ತು ಎಂದು ಉಲ್ಲೇಖಿಸಿದ ಯತ್ನಾಳ, ಎಸ್ಐಆರ್ ಪ್ರಕ್ರಿಯೆಯಿಂದ ಅಕ್ರಮ ಮತಗಳು ತೆರವಾಗುತ್ತಿರುವ ಹಿನ್ನೆಲೆಯಲ್ಲಿ ಆತಂಕಕ್ಕೊಳಗಾಗಿದ್ದಾರೆ ಎಂದು ಆರೋಪಿಸಿದರು.


ಉದಯವಾಹಿನಿ ಚಿತ್ರ

## ಡ್ರೈವರ್ ಲೆಸ್ ವಾಹನ ತಯಾರಿಸಿದ ಮಂಗಳೂರಿನ ಇಂಜಿನಿಯರಿಂಗ್ ವಿದ್ಯಾರ್ಥಿಗಳು!

### ಮ್ಯಾನ್ಯುಯಲ್ ಕಂಟ್ರೋಲ್‌ನಲ್ಲಿ ಇದು ಗಂಟೆಗೆ 20ರಿಂದ 25 ಕಿ.ಮೀ. ವೇಗದಲ್ಲಿ ಯಶಸ್ವಿಯಾಗಿ ಚಲಿಸುತ್ತದೆ

• ಉದಯವಾಹಿನಿ, ಮಂಗಳೂರು:

ಕೃತಕ ಬುದ್ಧಿಮತ್ತೆ ಮತ್ತು ಆಧುನಿಕ ತಂತ್ರಜ್ಞಾನದ ಈ ಯುಗದಲ್ಲಿ ಭಾರತೀಯ ಶೈಕ್ಷಣಿಕ ಕ್ಷೇತ್ರ ಕೇವಲ ಪಠ್ಯಪುಸ್ತಕದ

> 1 : ಮ್ಯಾಪ್ ಆಧಾರಿತ ಚಾಲನೆ
> 2 : 22 ಕಿ.ಮೀ. ಚಾಲನಾ ವ್ಯಾಪ್ತಿ
> 3 : ವಿಶ್ಯುವಲ್ ಫೀಡ್‌ಬ್ಯಾಕ್ ಸೆನ್ಸರ್

ಬೋಧನೆಗೆ ಸೀಮಿತವಾಗಿಲ್ಲ ಎಂಬುದನ್ನು ಕರಾವಳಿಯ ಯುವ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಮತ್ತೆ ಸಾಬೀತುಪಡಿಸಿದ್ದಾರೆ. ಮಂಗಳೂರಿನ ಮುಕ್ಕದ ಶ್ರೀನಿವಾಸ್ ಯೂನಿವರ್ಸಿಟಿಯ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಆ್ಯಂಡ್ ಟೆಕ್ನಾಲಜಿಯ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ತಂಡ ಯಾವುದೇ ಚಾಲಕನ ಹಸ್ತಕ್ಷೇಪವಿಲ್ಲದೆ ಸ್ವಯಂಚಾಲಿತವಾಗಿ ಚಲಿಸುವ 'ಶ್ರೀ-ವಾಹನ್' ಎಂಬ ಅತ್ಯಾಧುನಿಕ ಆಟೋನಾಮಸ್ ವಾಹನವನ್ನು ಯಶಸ್ವಿಯಾಗಿ ಅಭಿವೃದ್ಧಿಪಡಿಸಿದೆ. ಮಾರುಕಟ್ಟೆಯಲ್ಲಿ ಲಭ್ಯವಿರುವ ಚಾಲಕರಹಿತ ಕಾರುಗಳು ಕೋಟ್ಯಂತರ ರೂಪಾಯಿ ವೆಚ್ಚದ್ದಾಗಿದ್ದರೆ, ಈ ಯುವ ವಿಜ್ಞಾನಿಗಳ ತಂಡವು ತೀರ ಕಡಿಮೆ ವೆಚ್ಚದಲ್ಲಿ 4 ಲಕ್ಷದಲ್ಲಿ, ಸಾಮಾನ್ಯ ಅಥವಾ ಹಳೆಯ ವಾಹನಗಳಿಗೂ ಅಳವಡಿಸಬಹುದಾದ ಸ್ವಯಂಚಾಲಿತ ತಂತ್ರಜ್ಞಾನವನ್ನು ಆವಿಷ್ಕರಿಸಿ ಎಲ್ಲರ ಗಮನ ಸೆಳೆದಿದೆ. 'ಶ್ರೀ-ವಾಹನ್' ಎನ್ನುವುದು ಕೃತಕ ಬುದ್ಧಿಮತ್ತೆ, ಸೆನ್ಸರ್ ಮತ್ತು ಕ್ಯಾಮೆರಾ ಆಧಾರಿತ ಮ್ಯಾಪಿಂಗ್ ತಂತ್ರಜ್ಞಾನದಿಂದ ಚಲಿಸುವ ಒಂದು ಸೆಲ್ಫ್-ಡ್ರೈವಿಂಗ್ ಗ್ರೌಂಡ್ ವೆಹಿಕಲ್. ಈ ವಾಹನದ ಪ್ರಮುಖ ತಾಂತ್ರಿಕ ಅಂಶಗಳು ಮತ್ತು ವಿಶೇಷತೆಗಳು ಈ ಕೆಳಗಿನಂತಿವೆ. ಈ ವಾಹನಕ್ಕೆ ಮುಂಚಿತವಾಗಿಯೇ ನಿರ್ದಿಷ್ಟ ಮಾರ್ಗದ ತರಬೇತಿ ನೀಡಲಾಗಿರುತ್ತದೆ. ನೀಡಲಾದ ಮ್ಯಾಪ್ ಆಧಾರದ ಮೇಲೆ ಇದು ಯಾವುದೇ ಡ್ರೈವರ್ ಇಲ್ಲದೆ ತಾನಾಗಿಯೇ ಸುರಕ್ಷಿತವಾಗಿ ಚಲಿಸುತ್ತದೆ. ಪ್ರಸ್ತುತ ಸಂಶೋಧನಾ ಹಂತದಲ್ಲಿ ಆಟೋನಾಮಸ್ ಮೋಡ್‌ನಲ್ಲಿ ಸುರಕ್ಷತೆಯ ದೃಷ್ಟಿಯಿಂದ ಗಂಟೆಗೆ 5 ಕಿ.ಮೀ. ವೇಗವನ್ನು ಕಾಯ್ದುಕೊಳ್ಳಲಾಗಿದೆ. ಮ್ಯಾನ್ಯುಯಲ್ ಕಂಟ್ರೋಲ್‌ನಲ್ಲಿ ಇದು ಗಂಟೆಗೆ 20ರಿಂದ 25 ಕಿ.ಮೀ. ವೇಗದಲ್ಲಿ ಯಶಸ್ವಿಯಾಗಿ ಚಲಿಸುತ್ತದೆ. ವಾಹನವು ಒಂದು ಬಾರಿಯ ಚಾರ್ಜ್ ನಲ್ಲಿ 15ರಿಂದ 22 ಕಿಲೋ ಮೀಟರ್‌ಗಳಷ್ಟು ಸುದೀರ್ಘ ದೂರದವರೆಗೆ ಸ್ವಯಂ ಚಾಲಿತವಾಗಿ ಸಾಗುವ ಸಾಮರ್ಥ್ಯ ಹೊಂದಿದೆ.

ಈ ವಾಹನವು ಒಟ್ಟಾರೆಯಾಗಿ 360 ಕಿಲೋಗ್ರಾಂಗಳಷ್ಟು ಭಾರವನ್ನು ಹೊತ್ತೊಯ್ಯಬಲ್ಲದು. ಅಂದರೆ ಸರಿಸುಮಾರು 6 ಜನರು ಇದರಲ್ಲಿ ಏಕಕಾಲಕ್ಕೆ ಪ್ರಯಾಣಿಸಬಹುದು ಅಥವಾ ಅಷ್ಟೇ ತೂಕದ ಸರಕನ್ನು ಸಾಗಿಸಬಹುದು.

ವಾಹನದ ಹೆಡ್‌ರೆಸ್ಟ್ ಹಾಗೂ ಮುಂಭಾಗದಲ್ಲಿ ಅತ್ಯಾಧುನಿಕ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಆಟೋನಾಮಸ್ ಮೋಡ್‌ನಲ್ಲಿ ಚಲಿಸುವಾಗ ಮಾರ್ಗದಲ್ಲಿ ಏನಾದರೂ ಅಡೆತಡೆಗಳು ಎದುರಾದರೆ ಅಥವಾ ತಾಂತ್ರಿಕ ದೋಷ ಕಂಡುಬಂದರೆ, ಕ್ಯಾಮೆರಾ ವಿಶುವಲ್ ಫೀಡ್‌ಬ್ಯಾಕ್ ಮೂಲಕ ರಿಮೋಟ್ ಕಂಟ್ರೋಲ್ ಬಳಸಿ ವಾಹನವನ್ನು ತಕ್ಷಣವೇ ನಿಯಂತ್ರಿಸಬಹುದಾಗಿದೆ. ಕೇವಲ ಕಾಲೇಜು ಕ್ಯಾಂಪಸ್ ಒಳಗಿನ ಪ್ರಯಾಣಕ್ಕೆ ಮಾತ್ರವಲ್ಲದೆ, ವಿವಿಧ ಪ್ರಮುಖ ಕ್ಷೇತ್ರಗಳಲ್ಲಿ ಇದನ್ನು ಬಳಸಿಕೊಳ್ಳುವಂತೆ ವಿನ್ಯಾಸಗೊಳಿಸಲಾಗಿದೆ.



ಉದಯವಾಹಿನಿ ಚಿತ್ರ

> ಬೃಹತ್ ಕಾಲೇಜು ಕ್ಯಾಂಪಸ್‌ಗಳು, ಸಾಫ್ಟ್‌ವೇರ್ ಪಾರ್ಕ್‌ಗಳು ಹಾಗೂ ಕೈಗಾರಿಕಾ ವಲಯಗಳಲ್ಲಿ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಸಂಚಾರಕ್ಕೆ ಅತ್ಯಂತ ಸೂಕ್ತ. ಈ ವಾಹನದ ಸೀಟ್‌ಗಳನ್ನು ಸುಲಭವಾಗಿ ತೆಗೆದುಹಾಕಿ, ಆಂಬ್ಯುಲೆನ್ಸ್ ಮಾದರಿಯಲ್ಲಿ ಬದಲಾಯಿಸಬಹುದು. ರೋಗಿಗಳನ್ನು ಮಲಗಿಸಿಕೊಂಡು ಒಂದು ಆಸ್ಪತ್ರೆಯ ಬ್ಲಾಕ್‌ನಿಂದ ಮತ್ತೊಂದು ಬ್ಲಾಕ್‌ಗೆ ಸುರಕ್ಷಿತವಾಗಿ ಕರೆದೊಯ್ಯಲು ಇದು ಸಹಕಾರಿ.
> -ಯುವ ಇಂಜಿನಿಯರಿಂಗ್

> ಗಡಿಭಾಗಗಳಲ್ಲಿ ಹಾಗೂ ಅಪಾಯಕಾರಿ ಪ್ರದೇಶಗಳಲ್ಲಿ ಸೈನಿಕರ ಜೀವಕ್ಕೆ ಅಪಾಯವಿಲ್ಲದೆ, ದೂರದಲ್ಲೇ ಕುಳಿತು ರಿಮೋಟ್ ಕಂಟ್ರೋಲ್ ಮೂಲಕ ಶಸ್ತ್ರಾಸ್ತ್ರಗಳು, ಆಹಾರ ಹಾಗೂ ಇತರೆ ಸಾಮಗ್ರಿಗಳನ್ನು ಸಾಗಿಸಲು ಇದು ಅತ್ಯಂತ ಉಪಯುಕ್ತ. ಟೆಸ್ಲಾದಂತಹ ದೊಡ್ಡ ಕಂಪನಿಗಳ ಆಟೋನಾಮಸ್ ಕಾರುಗಳು ಅತ್ಯಂತ ದುಬಾರಿಯಾಗಿರುತ್ತವೆ. ಆದರೆ ಶ್ರೀ-ವಾಹನ್ ತಂತ್ರಜ್ಞಾನವನ್ನು ಹಳೆಯ ವಾಹನಗಳಿಗೂ ಅಳವಡಿಸಿ ಅತ್ಯಂತ ಕಡಿಮೆ ವೆಚ್ಚದಲ್ಲಿ ಸಿದ್ಧಪಡಿಸಬಹುದು.

> ತಮ್ಮ ಸುದೀರ್ಘ 6 ತಿಂಗಳ ಶ್ರಮದ ಫಲವಾಗಿ ರೂಪುಗೊಂಡ ಈ 'ಶ್ರೀ-ವಾಹನ್', ಕೇವಲ ವಿದ್ಯಾರ್ಥಿಗಳ ಶೈಕ್ಷಣಿಕ ಯೋಜನೆಯಾಗಿ ಉಳಿಯದೆ, ಭವಿಷ್ಯದ ಭಾರತೀಯ ಸಾರಿಗೆ, ವೈದ್ಯಕೀಯ ಹಾಗೂ ದೇಶದ ರಕ್ಷಣಾ ಕ್ಷೇತ್ರಕ್ಕೆ ಅತ್ಯಮೂಲ್ಯ ಕೊಡುಗೆಯಾಗುವ ಎಲ್ಲಾ ಲಕ್ಷಣಗಳನ್ನು ಹೊಂದಿದೆ. ಕನಿಷ್ಠ ವೆಚ್ಚದಲ್ಲಿ ಗರಿಷ್ಠ ತಂತ್ರಜ್ಞಾನ ಬಳಸಿ ಸಾಧನೆ ಮಾಡಿದ ಯುವ ಇಂಜಿನಿಯರ್‌ಗಳ ಈ ಕಾರ್ಯಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗುತ್ತಿದೆ.